# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 57 | THURSDAY 07-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ಸಂಪತ್ತು- ಆಡಳಿತ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು:

# ಸಾಮಾಜಿಕ ನ್ಯಾಯಕ್ಕೆ ಸರ್ಕಾರ ಬದ್ಧ- ಸಿದ್ದರಾಮಯ್ಯ



ಮೈಸೂರು: ಆರ್ಥಿಕ ಹಾಗೂ ಸಾಮಾಜಿಕ ಶಕ್ತಿಗಾಗಿ ಶಿಕ್ಷಣ ಅಗತ್ಯವಾಗಿದ್ದು, ಭೋವಿ ಜನಾಂಗದವರು ಶಿಕ್ಷಣಕ್ಕೆ ಒತ್ತು ನೀಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಜಿಲ್ಲಾಡಳಿತದಿಂದ ಆಯೋಜಿಸಿದ್ದ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ರಾಜ್ಯದಲ್ಲಿ ಸಮಸಮಾಜ ನಿರ್ಮಿಸುವ ಸಂಕಲ್ಪವನ್ನು ಸರ್ಕಾರ ಹೊಂದಿದೆ. ಉತ್ಪಾದಿಸಿದ ಸಂಪತ್ತು ಸಮಾನವಾಗಿ ಹಂಚಿಕೆಯಾಗಿಬೇಕು. ರಾಜ್ಯದ ಸರ್ವರಿಗೂ ಸಮಪಾಲು, ಸಮಬಾಳು ಸಿಗಬೇಕೆಂಬುದೇ ಸರ್ಕಾರದ ಉದ್ದೇಶ ಎಂದರು.

ಸಿದ್ದರಾಮೇಶ್ವರರೂ ಸೇರಿದಂತೆ ಸಂತಮಹಾಶಯರು, ಸಮಾಜದಲ್ಲಿ ಜಾತಿವರ್ಗಗಳ ವ್ಯವಸ್ಥೆಗಳು ತೊಲಗಬೇಕು ಎಂದು ಬಯಸಿದ್ದರು. ಬಸವಾದಿ ಶರಣರು 12 ನೇ ಶತಮಾನದಲ್ಲಿ ಸಮಾನತೆಯ ಸಿದ್ಧಾಂತವನ್ನು ಬೋಧಿಸಿದ್ದರು. ಶೋಷಣೆಗೊಳಗಾದ ಹಾಗೂ ಅವಕಾಶವಂಚಿತ ಸಮುದಾಯಗಳು ಸಂಘಟಿತರಾಗುವ ಸಮ್ಮೇಳನಗಳು ಉತ್ತಮ ಕಾರ್ಯಗಳಾಗಿವೆ ಎಂದು ತಿಳಿಸಿದರು.

ಬಸವಣ್ಣನವರು ಬೋಧಿಸಿದಂತೆ ಸಾಮಾಜಿಕ ನ್ಯಾಯದಲ್ಲಿ ನಾನು ನಂಬಿಕೆಯಿರಿಸಿದ್ದೇನೆ. ರಾಜಕೀಯ ಸ್ವಾತಂತ್ರ್ಯ ಆರ್ಥಿಕ ಹಾಗೂ ಸಾಮಾಜಿಕ ಸ್ವಾತಂತ್ರ್ಯದ ತಳಹದಿಯ ಮೇಲೆ ನಿಂತಿದೆ. ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕ ಆರ್ಥಿಕ ಶಕ್ತಿ ದೊರಕಲು ಸಾಧ್ಯ ಎಂದು ಹೇಳಿದರು.

**ಗ್ಯಾರಂಟಿ ಯೋಜನೆಗಳು ಮಹಿಳಾ ಸಮೂಹಕ್ಕೆ ವರದಾನ:** ಆರ್ಥಿಕವಾಗಿ ಶಕ್ತಿಯಿಲ್ಲದವರಿಗೆ ಗ್ಯಾರಂಟಿ ಯೋಜನೆಗಳನ್ನು ಸಮಾನವಾಗಿ ನೀಡಲಾಗಿದೆ. ಮಹಿಳೆಯರಿಗೆ ಶಕ್ತಿ ಹಾಗೂ ಗೃಹಲಕ್ಷ್ಮಿ ಯೋಜನೆಯನ್ನು ಯಾವುದೇ ತಾರತಮ್ಯವಿಲ್ಲದೇ ನೀಡಲಾಗುತ್ತಿದೆ. ನಮ್ಮ ಸರ್ಕಾರ ಭೋವಿ ನಿಗಮವೂ ಸೇರಿದಂತೆ ವಿವಿಧ ಸಮುದಾಯಗಳ ಅಭಿವೃದ್ಧಿ ನಿಗಮಗಳ ಸಾಲವನ್ನು ಮನ್ನಾ ಮಾಡಲಾಗಿದೆ.

ಪರಿಶಿಷ್ಟ ಜಾತಿಯ ಸಮುದಾಯಗಳಲ್ಲಿನ ಅಸಮಾನತೆ ಹೋಗಲಾಡಿಸಲು ಐತಿಹಾಸಿಕ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ ಎಡಗೈಗೆ ಶೇ. 5.25 , ಬಲಗೈಗೆ ಶೇ.5.25 ಹಾಗೂ ಇತರ ಉಪಜಾತಿಗಳಿಗೆ ಶೇ.4.5 ರಷ್ಟು ಹಂಚಿಕೆ ಮಾಡಲಾಗಿದೆ ಎಂದರು.

ಸರ್ಕಾರ ಸಾಮಾಜಿಕ ನ್ಯಾಯಕ್ಕೆ ಬದ್ಧ: ಈಗ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಜಾತಿ ಸಮೀಕ್ಷೆ ವರದಿ ಬಂದ ನಂತರ ಚರ್ಚೆ ಮಾಡೋಣ ಎಂದರು. ನಮ್ಮ ಸರ್ಕಾರ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ. ಯಾರಿಗೂ ಅನ್ಯಾಯವಾಗಬಾರದು, ನೂರಕ್ಕೆ ನೂರು ಅಲ್ಲದಿದ್ದರೂ 99% ನ್ಯಾಯ ಒದಗಿಸಲು ಪ್ರಯತ್ನಿಸಲಾಗುವುದು ಎಂದರು.

ಅವಕಾಶಗಳಿಂದ ಯಾರೂ ವಂಚಿತರಾಗಬಾರದು: ಸಮುದಾಯದವರು ಇಟ್ಟಿರುವ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಭರವಸೆ ನೀಡಿದ ಮುಖ್ಯಮಂತ್ರಿಗಳು ಸಮುದಾಯದವರಿಗೆ ಕುಲಪತಿ, ವಿಧಾನ ಪರಿಷತ್ ಸದಸ್ಯ ಸ್ಥಾನ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದರು.

ಏಳು ಕೋಟಿ ಜನರಿಗೂ ನ್ಯಾಯ ಸಿಗಬೇಕು ಹಾಗೂ ಯಾರೂ ಅವಕಾಶಗಳಿಂದ ವಂಚಿತರಾಗಬಾರದು ಎಂದರು. ಸಂವಿಧಾನ ರಚನೆಯಾದ ನಂತರ ಸಮಾನತೆಯನ್ನು ಸಾಧಿಸುವತ್ತ ದೇಶ ಸಾಗಿದ್ದು, ಸಂವಿಧಾನ ಹೇಳುವಂತೆಯೇ ನಡೆದುಕೊಳ್ಳುತ್ತೇವೆ ಎಂದು ತಿಳಿಸಿದರು.

**ಸಹಿಷ್ಣುತೆಯನ್ನು ರೂಡಿಸಿಕೊಳ್ಳಬೇಕು:** ಸ್ವಾತಂತ್ರ್ಯ ಸಮಾನತೆ ಮತ್ತು ಭ್ರಾತೃತ್ವ ಸಂವಿಧಾನದ ಮೂಲ ತತ್ವಗಳು. ಜಡತ್ವದಿಂದ ಕೂಡಿರುವ ಜಾತಿ ವ್ಯವಸ್ಥೆಯನ್ನು ಸುಧಾರಿಸಬೇಕಿದೆ. ಎಲ್ಲಾ ಜಾತಿಗಳನ್ನು ಪ್ರೀತಿಸಿ, ಅವರೂ ನಮ್ಮನ್ನು ಪ್ರೀತಿಸುವಂತೆ ಮಾಡಬೇಕು ಹಾಗೂ ಸಹಿಷ್ಣುತೆಯನ್ನು ರೂಡಿಸಿಕೊಳ್ಳಬೇಕು. ಉತ್ಪಾದನೆಯಲ್ಲಿ ಎಲ್ಲರೂ ಭಾಗವಹಿ ಉತ್ಪನ್ನವನ್ನು ಸಮಾನವಾಗಿ ಹಂಚಿಕೊಳ್ಳಬೇಕು ಎಂದು ಸಿದ್ಧರಾಮೇಶ್ವರರು ನಮಗೆ ಬೋಧಿಸಿದ್ದರು. ಅವರು ನಡೆದ ಹಾದಿಯಲ್ಲಿಯೇ ನಮ್ಮ ಸರ್ಕಾರವೂ ನಡೆಯುತ್ತಿದೆ ಎಂದರು.

## ದಾವಣಗೆರೆ ಉಪಚುನಾವಣೆಯಲ್ಲಿ SDPI ಕಡೆಗೆ ಮುಸ್ಲಿಂ ಮತಗಳ ಪಲ್ಲಟ: ಪಕ್ಷ ಮಟ್ಟದಲ್ಲಿ ತನಿಖೆ; ಸಿದ್ದರಾಮಯ್ಯ



ಬೆಂಗಳೂರು: ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಎಸ್‌ಡಿಪಿಐಗೆ ಮತ ಬಿದ್ದಿದೆ. ನಾವು ಎಲ್ಲಿ ಎಡವಿದ್ದೇವೆ ಎಂಬುದನ್ನು ಪಕ್ಷದ ಮಟ್ಟದಲ್ಲಿ ಪರಿಶೀಲಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿದ ಅವರು, ದಾವಣಗೆರೆ ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದಿದ್ದರೂ, ಮುಸ್ಲಿಂ ಮತಗಳು ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (SDPI) ಕಡೆಗೆ ಪಲ್ಲಟಗೊಂಡಿರುವುದರಿಂದ ಗೆಲುವಿನ ಅಂತರ ಕಡಿಮೆಯಾಗಿದೆ ಎಂದು ಹೇಳಿದರು.

ದಾವಣಗೆರೆಯಲ್ಲಿ ಒಟ್ಟು 56 ಸಾವಿರ ಮುಸ್ಲಿಮರು ಮತ ಚಲಾಯಿಸಿದ್ದು, ಈ ಪೈಕಿ, ಕಾಂಗ್ರೆಸ್‌ಗೆ 35 ಸಾವಿರ ಮತ ಬಂದಿದೆ. ನಮ್ಮ ಲೆಕ್ಕಾಚಾರ ಮೀರಿ, ಎಸ್‌ಡಿಪಿಐಗೆ ಈ ಬಾರಿ ಹೆಚ್ಚು ಮತ ಬಿದ್ದಿದೆ. ನಮಗೆ ಏಕೆ ಕಡಿಮೆ ಮತ ಬಂದಿವೆ ಎಂದು ವಿಚಾರ ಮಾಡುತ್ತೇವೆ ಎಂದರು.

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆಯ ಫಲಿತಾಂಶ 2028ರ ಚುನಾವಣೆಗೆ ದಿಕ್ಸೂಚಿ ಎಂದು ಬಿಜೆಪಿಯವರು ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಹೇಳುತ್ತಿದ್ದರು. ಈ ಎರಡೂ ಕ್ಷೇತ್ರಗಳನ್ನು ನಾವು ಗೆದ್ದಿದ್ದೇವೆ. ಬಿಜೆಪಿಯವರ ಪ್ರಕಾರ 2028ರಲ್ಲೂ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದಾಯಿತು ಎಂದರು.

ಕಾಂಗ್ರೆಸ್ ನಾಯಕರಾದ ಅಬ್ದುಲ್ ಜಬ್ಬಾರ್ ಮತ್ತು ನಾಸೀರ್ ಅಹ್ಮದ್ ವಿರುದ್ಧ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಕೈಗೊಂಡ ಅಮಾನತು ಕ್ರಮವನ್ನು ಸಿದ್ದರಾಮಯ್ಯ ಸಮರ್ಥಿಸಿಕೊಂಡರು.

ತಮಿಳುನಾಡು ಚುನಾವಣೆಯಲ್ಲಿ ನಟ ವಿಜಯ್ ಅವರ ಟಿವಿಕೆ ಪಕ್ಷ ಗೆಲುವು ಸಾಧಿಸುವ ಕುರಿತು ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, 'ತಮಿಳುನಾಡಿನ ಜನರು ಬದಲಾವಣೆ ಬಯಸಿದ್ದಾರೆ. ಯುವ ಜನಾಂಗ ನಟ ವಿಜಯ್‌ಗೆ ಮತ ಹಾಕಿದ್ದಾರೆ. ಇದು ಅಚ್ಚರಿಯ ಫಲಿತಾಂಶ. ಬೇರೆ ರಾಜ್ಯಗಳ ಮೇಲೆ ಪ್ರಭಾವ ಬೀರುವುದಿಲ್ಲ.ಕೇರಳದಲ್ಲಿ ನಿರೀಕ್ಷೆಯಂತೆ ನಾವು ಗೆದ್ದಿದ್ದೇವೆ' ಎಂದರು.

## ಧಾರವಾಡ ಉಪಚುನಾವಣೆ: ಕುಲಕರ್ಣಿ ಪತ್ನಿಗೆ ಸಿಗುತ್ತಾ ಟಿಕೆಟ್...?



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ವಿಧಾನಸಭಾ ಕ್ಷೇತ್ರ ಉಪಚುನಾವಣೆಯ ಚಟುವಟಿಕೆಗಳು ಜೋರಾಗಿವೆ. ಹತ್ಯೆ ಪ್ರಕರಣದಲ್ಲಿ ಶಿಕ್ಷೆ ಹಿನ್ನೆಲೆಯಲ್ಲಿ ವಿನಯ್ ಕುಲಕರ್ಣಿ ಅವರನ್ನು ವಿಧಾನಸಭಾ ಸದಸ್ಯ ಸ್ಥಾನದಿಂದ ಅನರ್ಹಗೊಳಿಸಲಾಗಿದ್ದು, ಕ್ಷೇತ್ರ ಖಾಲಿಯಾಗಿರುವುದರಿಂದ ಶೀಘ್ರದಲ್ಲೇ ಉಪಚುನಾವಣೆ ನಡೆಯಲಿದೆ.

ಕಾಂಗ್ರೆಸ್ ವಲಯದಲ್ಲಿ ಕುಲಕರ್ಣಿ ಅವರ ಪತ್ನಿ ವಿನಯ್ ಶಿವಲೀಲಾ ಕುಲಕರ್ಣಿ ಅವರನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸುವ ಕುರಿತು ಚಿಂತನೆ ನಡೆಯುತ್ತಿದೆ ಎನ್ನಲಾಗುತ್ತಿದ್ದು, ಇದರ ಬೆನ್ನಲ್ಲೇ ಬೆಂಬಲಿಗರು ಆನ್‌ಲೈನ್ ಅಭಿಯಾನ ಆರಂಭಿಸಿದ್ದಾರೆ.

ಸಹಾನುಭೂತಿ ಹಾಗೂ ಕುಲಕರ್ಣಿ ಅವರ ಕ್ಷೇತ್ರ ಸೇವೆ ಮತದಾರರ ಮೇಲೆ ಪ್ರಭಾವ ಬೀರುತ್ತದೆ ಎಂಬ ನಂಬಿಕೆ ಅವರದ್ದಾಗಿದೆ.

ಇನ್ನೊಂದೆಡೆ ಬಿಜೆಪಿಯಲ್ಲಿ ಮಾಜಿ ಶಾಸಕ ಅಮೃತ್ ದೇಸಾಯಿ ಅವರಿಗೆ ಟಿಕೆಟ್ ಸಿಗುವ ಸಾಧ್ಯತೆ ಹೆಚ್ಚಿದೆ. ಕ್ಷೇತ್ರದೊಂದಿಗೆ ಉತ್ತಮ ಸಂಪರ್ಕ ಮತ್ತು ಹಿಂದಿನ ಗೆಲುವಿನ ಅನುಭವ ಅವರ ಪರ ಕೆಲಸ ಮಾಡಲಿದೆ ಎಂದು ಕಾರ್ಯಕರ್ತರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರಾಜಕೀಯದಲ್ಲಿ ಯಾವ ಕ್ಷಣದಲ್ಲೂ ಬದಲಾವಣೆ ಸಂಭವಿಸಬಹುದು. ಪಕ್ಷದ ಹೈಕಮಾಂಡ್ ತೀರ್ಮಾನವೇ ಅಂತಿಮ," ಎಂದು ಕಾಂಗ್ರೆಸ್ ಕಾರ್ಯಕರ್ತರು ತಿಳಿಸಿದ್ದಾರೆ.

ಶಿವಲೀಲಾ ಕರ್ನಾಟಕ ನಗರ ನೀರು ಸರಬರಾಜು ಒಳಚರಂಡಿ ಮಂಡಳಿಯ ಅಧ್ಯಕ್ಷೆ. ಕುಟುಂಬ ಸದಸ್ಯರಿಗೆ ಅವಕಾಶ ನೀಡುವುದರಿಂದ ಸ್ವಲ್ಪ ವಿರೋಧ ಉಂಟಾಗಬಹುದು. ಬಿಜೆಪಿ ಪರವಾಗಿ ಈಗ ದೇಸಾಯಿ ಹೊರತುಪಡಿಸಿ ಬೇರೆ ಹೆಸರುಗಳು ಕೇಳಿಬರುತ್ತಿಲ್ಲವಾದರೂ, ಉಪಚುನಾವಣೆಯ ಕಾವು ಹೆಚ್ಚಿದಂತೆ ರಾಜಕೀಯ ಚಿತ್ರಣ ಬದಲಾಗುವ ಸಾಧ್ಯತೆ ಇದೆ ಎಂದು ರಾಜಕೀಯ ತಜ್ಞರೊಬ್ಬರು ಹೇಳಿದ್ದಾರೆ.

### ಮೆಟ್ರಿಕ-ನಂತರದ ವಿದ್ಯಾರ್ಥಿಗಳ ಶುಲ್ಕ ವಿನಾಯಿತಿ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವ ಅವಧಿ ಮೇ. 16 ವರೆಗೆ ವಿಸ್ತರಣೆ

**ಬೆಳಗಾವಿ ವಾರ್ತೆ ಧಾರವಾಡ:** 2025-26ನೇ ಸಾಲಿನಲ್ಲಿ ಮೆಟ್ರಿಕ ನಂತರದ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ವಿನಾಯಿತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು, ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮೇ 16, 2025 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005, ಅಥವಾ bcwdhelpline@gmail.com ಗೆ ಭೇಟಿ ನೀಡಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ಮೇಲಿನ ದೌರ್ಜನ್ಯ-ದುರ್ಬಳಕೆ ಆರೋಪ: ವಚನಾನಂದ ಸ್ವಾಮಿಗೆ ನಿರೀಕ್ಷಣಾ ಜಾಮೀನು ಮಂಜೂರು



**ಬೆಳಗಾವಿ ವಾರ್ತೆ ಬೆಂಗಳೂರು:** ಮಕ್ಕಳ ಮೇಲಿನ ದೌರ್ಜನ್ಯ ಮತ್ತು ದುರ್ಬಳಕೆಯ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಪದಚ್ಯುತ ಪೀಠಾಧಿಪತಿ ವಚನಾನಂದ ಸ್ವಾಮೀಜಿ ಅವರಿಗೆ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

ಪೊಲೀಸ್ ಠಾಣೆಯಲ್ಲಿ ತನ್ನ ವಿರುದ್ಧ ದೂರು ದಾಖಲಾಗುವ ಸಾಧ್ಯತೆ ಇರುವುದನ್ನು ಗಮನಿಸಿ, ಸ್ವಾಮೀಜಿ ಏಪ್ರಿಲ್ 21ರಂದು ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಸೆಕ್ಷನ್ 482 ಅಡಿಯಲ್ಲಿ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು.

ಈ ಅರ್ಜಿಯನ್ನು ಪರಿಗಣಿಸಿದ ಹರಿಹರದ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು, ಸಾರ್ವಜನಿಕ ಅಭಿಯೋಜಕರ ಮತ್ತು ಸ್ವಾಮೀಜಿಯ ಪರ ವಕೀಲರ ವಾದಗಳನ್ನು ಆಲಿಸಿ ಜಾಮೀನು ಮಂಜೂರು ಮಾಡಿದೆ.

ಇದೇ ವೇಳೆ ನ್ಯಾಯಾಲಯವು ಜಾಮೀನಿಗೆ ಕೆಲವು ಕಠಿಣ ಷರತ್ತುಗಳನ್ನು ವಿಧಿಸಿದೆ. ತನಿಖೆಗೆ ಸಂಪೂರ್ಣ ಸಹಕಾರ ನೀಡಬೇಕು, ಸಾಕ್ಷ್ಯಗಳಿಗೆ ಧಕ್ಕೆ ಉಂಟುಮಾಡಬಾರದು ಹಾಗೂ ನ್ಯಾಯಾಲಯದ ಅನುಮತಿ ಇಲ್ಲದೆ ವ್ಯಾಪ್ತಿಯಿಂದ ಹೊರಗೆ ಹೋಗಬಾರದು ಎಂದು ಸೂಚಿಸಿದೆ.

ಏಪ್ರಿಲ್ 17ರಂದು ಮಕ್ಕಳ ಮೇಲಿನ ದೌರ್ಜನ್ಯ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಮಂಜುಳಾ ಮಹೇಶ್ ನೇತೃತ್ವದ ತಂಡ ಮಠಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತ್ತು.

ಮಠದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ಕೆಲವು ಮಕ್ಕಳು, ಸ್ವಾಮೀಜಿ ತಮ್ಮ ಮೇಲೆ ಹಲ್ಲೆ ನಡೆಸುತ್ತಾರೆ, ದುರ್ವ್ಯವಹಾರ ಮಾಡುತ್ತಾರೆ ಮತ್ತು ಅಸ್ವಸ್ಥರಾಗಿದ್ದಾಗ ಔಷಧ ನೀಡುವುದಿಲ್ಲ ಎಂದು ಆರೋಪಿಸಿದ್ದರು.

ಸಮಿತಿಯು ಮಕ್ಕಳ ವಾಸಸ್ಥಳ, ಸ್ವಾಮೀಜಿಯ ನಿವಾಸ ಮತ್ತು ಊಟದ ಹಾಲ್‌ಗಳನ್ನು ಪರಿಶೀಲಿಸಿದೆ. ಮೂವರು ಬಾಲಕರು ನೀಡಿದ ಹೇಳಿಕೆಗಳ ಆಧಾರದ ಮೇಲೆ ಮೂರು ಹಂತಗಳಲ್ಲಿ ವಿಚಾರಣೆ ನಡೆಯುತ್ತಿದ್ದು, ಅದು ಅಂತಿಮ ಹಂತ ತಲುಪಿದೆ ಎಂದು ಮೂಲಗಳು ತಿಳಿಸಿವೆ. ಈವರೆಗೆ ಸ್ವಾಮೀಜಿಯ ವಿರುದ್ಧ ಅಧಿಕೃತ ದೂರು ದಾಖಲಿಸಲಾಗಿಲ್ಲ. ಪ್ರಸ್ತುತ, ಮಠದ ಸುತ್ತಮುತ್ತ ನಿರ್ಬಂಧಾಜ್ಞೆ ಜಾರಿಯಲ್ಲಿದ್ದು, ಪರಿಸ್ಥಿತಿ ಉದ್ವಿಗ್ನವಾಗಿಯೇ ಮುಂದುವರಿದಿದೆ.

## Heavy Rain: ರಾಜ್ಯದಲ್ಲಿ ಮುಂದಿನ ಮೂರು ದಿನ ಗುಡುಗು ಸಹಿತ ಭಾರಿ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ!

**ಬೆಳಗಾವಿ ವಾರ್ತೆ ಬೆಂಗಳೂರು:** ರಾಜ್ಯದ ಕೆಲವು ದಿನಗಳಲ್ಲಿ ಹಲವೆಡೆ ಮಳೆಯಾಗುತ್ತಿದ್ದು, ರಣ ಬಿಸಿಲಿನಿಂದ ತತ್ತರಿಸಿದ ಜನತೆಗೆ ಕೊಂಚ ತಂಪೆರೆದಿದೆ. ಸಿಲಿಕಾನ್ ಸಿಟಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಮುಂದಿನ ಮೂರು ದಿನ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಮುನ್ನೆಚ್ಚರಿಕೆ ಕ್ರಮವಾಗಿ ರಾಜ್ಯದ ಒಟ್ಟು 13 ಜಿಲ್ಲೆಗಳಿಗೆ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ.

ರಾಜಧಾನಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಸೇರಿದಂತೆ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನ ಮಳೆ ಅಬ್ಬರಿಸಲಿದೆ. ಮೈಸೂರು, ಮಂಡ್ಯ, ಹಾಸನ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಿದೆ.

ಈ ವೇಳೆ ಗಂಟೆಗೆ ಸುಮಾರು 30 ರಿಂದ 40 ಕಿ. ಮೀ ವೇಗದಲ್ಲಿ ಬಲವಾದ ಗಾಳಿ ಬೀಸಲಿದ್ದು, ಜನ ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯ ಕೆಲವು ಭಾಗಗಗಳಲ್ಲಿ ಸಾಧಾರಣ ಮಳೆಯಾಗಲಿದೆ. ಆದರೆ ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸದ್ಯಕ್ಕೆ ಒಣ ಹವೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಮೇ 6 ರಂದು ಈ ಜಿಲ್ಲೆಗಳಲ್ಲಿ ಯೆಲ್ಲೊ ಅಲರ್ಟ್:** ದಕ್ಷಿಣ ಒಳನಾಡಿನ ಜೊತೆಗೆ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಿಗೂ ಅಲರ್ಟ್ ನೀಡಲಾಗಿದೆ. ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ನಗರ ಮತ್ತು ಗ್ರಾಮಾಂತರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಚಿಕ್ಕಮಗಳೂರು, ದಕ್ಷಿಣ ಕನ್ನಡಕ್ಕೆ ಯೆಲ್ಲೋ ಅಲರ್ಟ್ ನೀಡಲಾಗಿದೆ.

**ಮೇ 7 ರಂದು ಈ ಜಿಲ್ಲೆಗಳಲ್ಲಿ ಹಳದಿ ಅಲರ್ಟ್:** ಇನ್ನೂ ಮೇ 7 ರಂದು ಬೆಳಗಾವಿ, ಧಾರವಾಡ, ಹಾವೇರಿ ಮತ್ತು ಉತ್ತರ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ, ರಾಜ್ಯದ ಬಹುಪಾಲು ಎಲ್ಲಾ ಜಿಲ್ಲೆಗಳಿಗೂ ಹಳದಿ ಎಚ್ಚರಿಕೆ ನೀಡಲಾಗಿದೆ. ಕರಾವಳಿಯ ಉಡುಪಿ ಜಿಲ್ಲೆಗೂ ಅಲರ್ಟ್ ವಿಸ್ತರಣೆಯಾಗಿದೆ. ರಾಜ್ಯದಾದ್ಯಂತ ವ್ಯಾಪಕವಾಗಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮಳೆಯಾಗುವ ಎಚ್ಚರಿಕೆ ಇದೆ. ಜನರು ಮಳೆಯ ಸಂದರ್ಭದಲ್ಲಿ ಸುರಕ್ಷಿತ ಸ್ಥಳಗಳಲ್ಲಿರಲು ಸೂಚಿಸಲಾಗಿದೆ.



ಮೇ 8 ರಂದು ಕರಾವಳಿ ಕರ್ನಾಟಕ, ಮಧ್ಯ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಬಹುತೇಕ ಎಲ್ಲಾ ಜಿಲ್ಲೆಗಳಲ್ಲಿ ಹಳದಿ ಮುನ್ನೆಚ್ಚರಿಕೆ ಮುಂದುವರಿದಿದೆ. ಈ ಭಾಗಗಳಲ್ಲಿ ಗುಡುಗು, ಮಿಂಚು ಸಹಿತ ಸಾಧಾರಣ ಮಳೆ ಮತ್ತು ಬಿರುಗಾಳಿ ಮುಂದುವರಿಯಲಿದೆ.

ಮೇ 15ರ ಸುಮಾರಿಗೆ ನೈರುತ್ಯ ಮುಂಗಾರು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳನ್ನ ತಲುಪಲಿದೆ. ಅಲ್ಲಿಂದ ಕೇರಳಕ್ಕೆ ಬಂದು ನಂತರ ಕರ್ನಾಟಕಕ್ಕೆ ಪ್ರವೇಶ ಮಾಡಲಿದೆ. ಜೂನ್ ಮೊದಲ ವಾರದಲ್ಲಿ ಕರ್ನಾಟಕದಲ್ಲಿ ಮುಂಗಾರು ಪ್ರವೇಶ ಮಾಡುವ ಸಾಧ್ಯತೆಯಿದೆ.

# ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಕ.ಸಾ.ಪ ಇನ್ನೂ ಹೆಮ್ಮರವಾಗಿ ಬೆಳೆಯಲಿ : ಅಪ್ಸರಾಬೇಗಂ ಚಪ್ಪರಬಂದ



**ಬೆಳಗಾವಿ ವಾರ್ತೆ ವಿಜಯಪುರ:** ಕನ್ನಡ ತಾಯಿ ಭಾಷೆ, ಮಾತೃಭಾಷೆ, ನುಡಿ ಭಾಷೆ ಕನ್ನಡ ಅತ್ಯಂತ ಪ್ರಾಚೀನ ಭಾಷೆ. ಆದಿಕವಿ ಪಂಪನಿಂದ ಹಿಡಿದು ಕುವೆಂಪುರವರವರೆಗೆ ಕನ್ನಡ ನಾಡು-ನುಡಿ, ನೆಲ-ಜಲ, ಭಾಷೆಯ ಬಗ್ಗೆ ಅಭಿಮಾನ ಮೂಡಿಸುವ ಮೂಲಕ ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು ಇನ್ನೂ ಹೆಮ್ಮರವಾಗಿ ಬೆಳೆಯಲಿ ಎಂದು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ಅಪ್ಸರಾಬೇಗಂ ಚಪ್ಪರಬಂದ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಜರುಗಿದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು 1915ರಲ್ಲಿ ಸ್ಥಾಪನೆಯಾದ ಶತಮಾನದಷ್ಟು ಹಳೆಯದಾದ ಈ ಸಂಸ್ಥೆ ಸಾಹಿತ್ಯಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸುವಲ್ಲಿ ತನ್ನದೇಯಾದ ಮಹತ್ವದ ಪಾತ್ರ ವಹಿಸಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಕಸಾಪ ಗೌರವ ಕೋಶಾಧ್ಯಕ್ಷ ಅಭಿಷೆ?ಕ ಚಕ್ರವರ್ತಿ ಮಾತನಾಡಿ ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ದೊರಕಿದ್ದು, ಅಷ್ಟ ದಿಗ್ಗಜ ಕವಿಗಳು ಜ್ಞಾನಪೀಠ ಪ್ರಶಸ್ತಿಯನ್ನು ಮುಡಿಗೇರಿಸುವ ಮೂಲಕ ಕನ್ನಡ ಭಾಷೆ, ಸಾಹಿತ್ಯಕ್ಕೆ ಬಹುದೊಡ್ಡ ಕೊಡುಗೆ ನೀಡಿದ ಅಭಿಮಾನದ ಭಾಷೆ ಕನ್ನಡ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯ ಕುರಿತು ವಿಶೇಷ ಉಪನ್ಯಾಸ ನೀಡಿದ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಡಾ.ಮಾಧವ ಗುಡಿ ಮಾತನಾಡಿ, ಸಾಹಿತ್ಯವೆಂದರೆ ಭಾವನೆಗಳ ಹೂವಿನ ಹೊದಿಕೆ, ಕನ್ನಡ ಸಾಹಿತ್ಯವೆಂದರೆ ಸುಗಂಧದ ಭಂಡಾರವೆನ್ನುತ್ತ ಕನ್ನಡ- ಕನ್ನಡಿಗ- ಕರ್ನಾಟಕದ ಅಭಿಮಾನ ನಮ್ಮೆಲ್ಲರಲ್ಲಿ ಮೊಳಗಬೇಕು. ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ ಅವರ ವಿಶೇಷ ತ್ಯಾಗ,ಶ್ರಮದ ಫಲವಾಗಿ ದಿವಾನರಾದ ಸರ್ ಎಂ ವಿಶ್ವೇಶ್ವರಯ್ಯ, ಸರ್ ಮಿರ್ಜಾ ಇಸ್ಮಾಯಿಲ್ ಅವರ ವಿಶೇಷ ಕಾಳಜಿ, ಭಾಷೆಯ ಅಭಿಮಾನದಿಂದ ಹುಟ್ಟಿಕೊಂಡ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕಸಾಪದ ಹುಟ್ಟಿಗೆ ಕಾರಣೀಕರ್ತರಾದ ಅನೇಕ ಮಹನೀಯರನ್ನು ಸ್ಮರಣೆ ಮಾಡಿಕೊಳ್ಳುವ ಸುದಿನವೇ ಈ ಸಂಸ್ಥಾಪನಾ ದಿನಾಚರಣೆ ಎಂದ ಅವರು

ಕನ್ನಡ ಸಾಹಿತ್ಯ ಪರಿಷತ್ತು 1940ರಲ್ಲಿ ತನ್ನ ರಜತ ಮಹೋತ್ಸವವನ್ನು, 1965ರಲ್ಲಿ ತನ್ನ ಸುವರ್ಣ ಮಹೋತ್ಸವವನ್ನು, 2015ರಲ್ಲಿ ತನ್ನ ಶತಮಾನೋತ್ಸವವನ್ನು ಆಚರಿಸಿ ಕನ್ನಡಿಗರ ಸ್ವಾಭಿಮಾನದ ಸಂಕೇತವಾಗಿ, ಕನ್ನಡಿಗರ ಸ್ಥಾನಮಾನ, ಹಿತಾಸಕ್ತಿ ಮತ್ತು ಅಸ್ಮಿತೆಯನ್ನು ರಕ್ಷಿಸುವ ಕಾರ್ಯವನ್ನು ಪರಿಷತ್ತು ನಿರಂತರವಾಗಿ ಮಾಡುತ್ತಿದೆ ಎಂದರು. ಕಾರ್ಯಕ್ರಮದ ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ಆಶಾ ಬಸನಗೌಡ ಬಿರಾದಾರ, ಚಂದ್ರಕಾಂತ ಡೊಣಗಿ, ಭಾಗೀರಥಿ ಸಿಂಧೆ, ವಿಜಯಲಕ್ಷ್ಮಿ ಹಳಕಟ್ಟಿ, ಮಹಾದೇವ ಮೋಪಗಾರ ಮುಂತಾದವರು ಉಪಸ್ಥಿತರಿದ್ದು ಮಾತನಾಡಿದರು.

ಸುನಂದಾ ಕೋರಿ ಪ್ರಾರ್ಥಿಸಿದರು. ರಿಯಾಜ ಪಿಂಜಾರ ಸ್ವಾಗತಿಸಿ ಗೌರವಿಸಿದರು. ಜಯಶ್ರೀ ಹಿರೇಮಠ ನಿರೂಪಿಸಿದರು. ಶಶಿಕಲಾ ನಾಯ್ಕೋಡಿ ಕನ್ನಡದ ಗೀತೆಗಳನ್ನು ಹಾಡಿ ರಂಜಿಸಿದರು. ಮಂಜುಳಾ ಕಾಳಗಿ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ, ಮಮತಾ ಮುಳಸಾವಳಗಿ, ಅರ್ಜುನ ಶಿರೂರ, ವಾಯ್ ಎಚ್ ಲಂಬೂ, ಬಿ. ಎಂ. ಆಜೂರ,ಕೆ. ಎಸ್. ಹಣಮಾಣಿ, ಲತಾ ಗುಂಡಿ, ಶ್ರೀಕಾಂತ ನಾಡಗೌಡ, ರಾಜೇಶ್ವರಿ ಮೋಪಗಾರ, ಮೆಹತಾಬ ಕಾಗವಾಡ, ರೂಪಾ ರಜಪೂತ, ಪೊ??.ರಾ.ಶಿ.ವಾಡೇದ, ಮಹೇಶ ಕ್ಯಾತನ, ಸಂಗೀತಾ ರಾಠೋಡ, ನೀಲಾಂಬಿಕಾ ಬಿರಾದಾರ, ಲಕ್ಷ್ಮೀ ಬಿರಾದಾರ, ರಮೇಶ ಹಾದಿಮನಿ, ಸರ್ವಾನಂದ ಕೂಬರಡ್ಡಿ, ಚಂದ್ರಕಾಂತ ಚಲವಾದಿ, ಶಿವಲೀಲಾ ಹಿರೇಮಠ, ಶಿವಾಜಿ ಮೋರೆ, ಎಸ್.ಬಿ.ಬಿರಾದಾರ, ರಾವಸಾಹೇಬ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

**ತಾಲೂಕಾ ಕಸಾಪದಿಂದ 112ನೇ ಸಂಸ್ಥಾಪನಾ ದಿನಾಚರಣೆ:** ಮಧ್ಯಾಹ್ನ 2.00ಗಂಟೆಯಿಂದ ವಿಜಯಪುರ ತಾಲೂಕಾ ಸಾಹಿತ್ಯ ಪರಿಷತ್ತಿನ ವತಿಯಿಂದ 112ನೇ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯನ್ನು ಆಚರಿಸಲಾಯಿತು. ತಾಲೂಕಾ ಕಸಾಪ ಗೌರವ ಅಧ್ಯಕ್ಷರಾದ ಬಿ. ಎಂ. ಅಜೂರ ಪುಷಾ??ರ್ಚನೆ ಮಾಡಿ ಮಾತನಾಡಿ ಕನ್ನಡದ ಅನೇಕ ಕಟ್ಟಾಳುಗಳು ತಮ್ಮ ತ್ಯಾಗ ಮತ್ತು ಪರಿಶ್ರಮದ ಮೂಲಕ ಕಟ್ಟಿ ಹೋದ ಈ ಸಂಸ್ಥೆ ಸೂರ್ಯ ಚಂದ್ರರಿರುವವರೆಗೆ ಅಜರಾಮರವಾಗಿರಲಿ ಎಂದರು. ಅಧ್ಯಕ್ಷತೆಯನ್ನು ವಿಶ್ರಾಂತ ಅರಣ್ಯ ಇಲಾಖೆ ಅಧಿಕಾರಿ ಮಹೇಶ ಕ್ಯಾತನ ವಹಿಸಿ ಮಾತನಾಡಿದರು. ರಾಜೇಶ್ವರಿ ಮೋಪಗಾರ, ಸುನಂದಾ ಕೋರಿ, ರಾ. ಶಿ. ವಾಡೇದ, ಸರ್ವಾನಂದ ಕೂಬರಡ್ಡಿ, ಅರ್ಜುನ ಶಿರೂರ, ಶ್ರೀಕಾಂತ ನಾಡಗೌಡ ವೇದಿಕೆ ಮೇಲಿದ್ದರು.

ಮೆಹತಾಬ ಕಾಗವಾಡ ಪ್ರಾರ್ಥಿಸಿದರು. ಮಮತಾ ಮುಳಸಾವಳಗಿ ನಿರೂಪಿಸಿದರು. ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಬಿರಾದಾರ ವಂದಿಸಿದರು.

ಕಸಾಪ ನಗರ ಘಟಕದಲ್ಲಿ 112ನೇ ಸಂಸ್ಥಾಪನಾ ದಿನಾಚರಣೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಸಂಜೆ 4.00 ಗಂಟೆಗೆ ಜರುಗಿತು.

ಉದ್ಘಾಟನೆಯನ್ನು ನಗರ ಘಟಕದ ಗೌರವ ಅಧ್ಯಕ್ಷೆ ಜಯಶ್ರೀ ಹಿರೇಮಠ ಪುಷಾ??ರ್ಚನೆ ಮಾಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಕನ್ನಡ ಅನ್ನದ ಭಾಷೆ, ಆಡಳಿತ ಭಾಷೆಯಾಗಿ ಬೆಳೆಯಬೇಕು. ನನ್ನ ನುಡಿ,ನಮ್ಮೆಲ್ಲರ ಹೆಮ್ಮೆ ಎಂಬ ಮನೋಭಾವನೆ ಎಲ್ಲರಲ್ಲಿ ಮೂಡಬೇಕು ಎಂದರು. ಅಧ್ಯಕ್ಷತೆಯನ್ನು ರಾಜ್ಯ ವಾರ್ತಾ ಇಲಾಖೆಯ ವಿಶ್ರಾಂತ ನಿರ್ದೇಶಕ ಮಲ್ಲಿಕಾರ್ಜುನ ಕೆಳಗಡೆ ವಹಿಸಿ ಮಾತನಾಡಿದರು. ಸಾಹಿತಿ ವಾಯ್ ಎಚ್ ಲಂಬೂ ಉಪನ್ಯಾಸ ನೀಡಿದರು.

ಶಶಿಕಲಾ ನಾಯ್ಕೋಡಿ, ರೂಪಾ ರಜಪೂತ, ಮಂಜುಳಾ ಕಾಳಗಿ, ಅರ್ಜುನ ಶಿರೂರ, ರಾಜೇಶ್ವರಿ ಹಿಟ್ಟಿನಹಳ್ಳಿ ವೇದಿಕೆ ಮೇಲಿದ್ದರು. ಸುನಂದಾ ಕೋರಿ ಪ್ರಾರ್ಥಿಸಿದರು.

# ಪ್ರವಾಸಿ ವೀಸಾವನ್ನು ವಾಣಿಜ್ಯ ಉದ್ದೇಶಗಳಿಗೆ ಬಳಸಲು ಸಾಧ್ಯವಿಲ್ಲ: ಹೈಕೋರ್ಟ್



**ಬೆಳಗಾವಿ ವಾರ್ತೆ ಬೆಂಗಳೂರು:** ಪ್ರವಾಸಿ ವೀಸಾದ ಮೇಲೆ ದೇಶಕ್ಕೆ ಬರುವ ವಿದೇಶಿ ನಾಗರಿಕರು ಅದನ್ನು ವಾಣಿಜ್ಯ ಚಟುವಟಿಕೆಗಳಿಗೆ ಬಳಸಿಕೊಳ್ಳಲು ಅಥವಾ ಸಮಾಜದ ಶಾಂತಿ ಭಂಗಕ್ಕೆ ಕಾರಣವಾಗುವ ರೀತಿಯಲ್ಲಿ ವರ್ತಿಸಲು ಅನುಮತಿ ಇಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಫ್ರಾನ್ಸ್ ಪ್ರಜೆ 54 ವರ್ಷದ ಕ್ರಿಸ್ಟೋಫ್ ಸ್ಟೆಫಾನ್ ಮೊನ್ನಿಯನ್ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದ ವೇಳೆ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಈ ಅಭಿಪ್ರಾಯ ವ್ಯಕ್ತಪಡಿಸಿದರು. ಉತ್ತರ ಕನ್ನಡ ಜಿಲ್ಲೆಯ ಹಿಟ್ಟಲಮಕ್ಕಿಯಲ್ಲಿ ಹಲವು ವರ್ಷಗಳಿಂದ ರೆಸ್ಟೋರೆಂಟ್ ನಡೆಸುತ್ತಿದ್ದ ಮೊನ್ನಿಯನ್ ಅವರಿಗೆ ವಿದೇಶಿಗರ ಪ್ರಾದೇಶಿಕ ನೋಂದಣಿ ಅಧಿಕಾರಿ (FRRO) ನೀಡಿದ್ದ 'ಲೀವ್ ಇಂಡಿಯಾ ನೋಟಿಸ್' ನ್ನು ಅವರು ಪ್ರಶ್ನಿಸಿದ್ದರು.

ಕಳೆದ ಮಾರ್ಚ್ 16ರ ಈ ನೋಟೀಸ್ ನ್ನು ವಾಟ್ಸ್ಆ್ಯಪ್ ಮೂಲಕ ಅವರಿಗೆ ಕಳುಹಿಸಲಾಗಿತ್ತು. ನವೆಂಬರ್ 24, 2026ರವರೆಗೆ ಮಾನ್ಯತೆ ಹೊಂದಿರುವ ಪ್ರವಾಸಿ ವೀಸಾ ಹೊಂದಿರುವ ಕಾನೂನು ಪಾಲಕ ನಾಗರಿಕನಾದ ತಮಗೆ ಯಾವುದೇ ವಿಚಾರಣೆಗೆ ಅವಕಾಶ ನೀಡದೆ ದೇಶ ತೊರೆಯಲು ಸೂಚಿಸಿರುವುದು ಅಕ್ರಮ ಹಾಗೂ ಏಕಪಕ್ಷೀಯ ಕ್ರಮವಾಗಿದೆ ಎಂದು ಅವರು ವಾದಿಸಿದ್ದರು.

ಆದರೆ ನ್ಯಾಯಾಲಯ, ಅರ್ಜಿದಾರರು ತಮ್ಮ ವೀಸಾ ನಿಯಮಗಳನ್ನು ಉಲ್ಲಂಘಿಸಿರುವುದಾಗಿ ಮತ್ತು ಕಾನೂನು ಜಾರಿಗೆ ಸಂಬಂಧಿಸಿದ ಸಂಸ್ಥೆಗಳಿಂದ ಪ್ರತಿಕೂಲ ವರದಿಗಳು ಬಂದಿರುವುದಾಗಿ ಗಮನಿಸಿ, ಅವರಿಗೆ ನ್ಯಾಯಸಮ್ಮತ ಪರಿಹಾರ ನೀಡಲು ಸಾಧ್ಯವಿಲ್ಲ ಎಂದು ಹೇಳಿದೆ.

"ಲೀವ್ ಇಂಡಿಯಾ ನೋಟೀಸ್" ಕಾನೂನುಬದ್ಧ ಅಧಿಕಾರದ ಸರಿಯಾದ ಉಪಯೋಗವಾಗಿದ್ದು, ಇದರಲ್ಲಿ ಯಾವುದೇ ಏಕಪಕ್ಷೀಯತೆ ಅಥವಾ ಅಕ್ರಮವಿಲ್ಲ. ಇದು ವಿದೇಶಿ ನಾಗರಿಕರನ್ನು ನಿಯಂತ್ರಿಸುವ ಸಂವಿಧಾನಾತ್ಮಕ ಮತ್ತು ಕಾನೂನು ವ್ಯವಸ್ಥೆಗೆ ಅನುಗುಣವಾಗಿದೆ ಎಂದು ನ್ಯಾಯಾಲಯ ತೀರ್ಪು ನೀಡಿದೆ.

ವಿದೇಶಿ ನಾಗರಿಕರು ಭಾರತದಲ್ಲಿ ಉಳಿಯುವ ಹಕ್ಕನ್ನು ಸ್ವಯಂಪ್ರೇರಿತವಾಗಿ ಕೇಳಲು ಸಾಧ್ಯವಿಲ್ಲ. ವೀಸಾ ನಿಯಮಗಳನ್ನು ಉಲ್ಲಂಘಿಸಿ ವಾಣಿಜ್ಯ ಚಟುವಟಿಕೆಗಳಲ್ಲಿ ತೊಡಗಿದರೆ ತಪ್ಪು ಎಂದು ನ್ಯಾಯಾಲಯ ಹೇಳಿದೆ. ದಾಖಲೆಗಳ ಪ್ರಕಾರ, ಅರ್ಜಿದಾರರು ಪ್ರವಾಸಿ ವೀಸಾದ ಮಿತಿಯನ್ನು ಮೀರಿ ರೆಸ್ಟೋರೆಂಟ್ ನಡೆಸುವುದರ ಮೂಲಕ ಅನಧಿಕೃತ ಚಟುವಟಿಕೆಗಳಲ್ಲಿ ತೊಡಗಿದ್ದಷ್ಟೇ ಅಲ್ಲದೆ, ಸ್ಥಳೀಯ ಶಾಂತಿಗೆ ಧಕ್ಕೆ ಉಂಟಾಗಿದೆ ಎಂದು ನ್ಯಾಯಾಲಯ ಹೇಳಿದೆ.

### 'ಅಪ್ಪಾಜಿ'ಗೆ ಮಂತ್ರಿ ಸ್ಥಾನಕ್ಕಾಗಿ ಹೈಕಮಾಂಡ್‌ಗೆ ಎನ್‌ಎಸ್‌ಯುಐ, ಕಾಂಗ್ರೆಸ್ ಪಕ್ಷದ ಬಲವಾದ ಆಗ್ರಹ

# 2013ರ ಅನ್ಯಾಯ ಈ ಬಾರಿ ಮರುಕಳಿಸದಿರಲಿ; ಸಿ.ಎಸ್. ನಾಡಗೌಡರಿಗೆ ಸಚಿವ ಸ್ಥಾನ ಖಚಿತವಾಗಲಿ: ಸದ್ದಾಂ ಕುಂಟೋಜಿ




**ಬೆಳಗಾವಿ ವಾರ್ತೆಮುದ್ದೇಬಿಹಾಳ:** ಪಕ್ಷನಿಷ್ಠೆಗೆ ಹೆಸರಾದ, ಮುದ್ದೇಬಿಹಾಳ ಮತಕ್ಷೇತ್ರದಲ್ಲಿ ಅಜಾತಶತ್ರುವಾಗಿ ಆರು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಹಿರಿಯ ನಾಯಕ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರಿಗೆ ಸಚಿವ ಸ್ಥಾನ ನೀಡುವುದು ನ್ಯಾಯ ಸಮ್ಮತವಾಗಿದೆ" ಎಂದು ಯುವ ಕಾಂಗ್ರೆಸ್ ಹಾಗೂ ಓಖಗಖ ಘಟಕಗಳು ರಾಜ್ಯ ಸರ್ಕಾರಕ್ಕೆ ಮತ್ತು ಕಾಂಗ್ರೆಸ್ ಹೈಕಮಾಂಡ್‌ಗೆ ಭಿನ್ನವಿಸಿಕೊಂಡಿವೆ.


ಇಲ್ಲಿನ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಜರುಗಿದ ಪತ್ರಿಕಾ ಗೋಷ್ಠಿಯಲ್ಲಿ ನಾಡಗೌಡರ ಸುದೀರ್ಘ ರಾಜಕೀಯ ಸೇವೆ ಹಾಗೂ ಪಕ್ಷ ಸಂಘಟನೆಯ ಬಗ್ಗೆ ಎಳೆಎಳೆಯಾಗಿ ಬಿಡಿಸಿಟ್ಟರು. ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ಎನ್ ಎಸ್ ಯುಐ ರಾಜ್ಯ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ, 1989 ಮೊದಲು ಬಾರಿಗೆ ನಾಡಗೌಡ ಶಾಸಕರಾಗಿ ಕಾಂಗ್ರೆಸ್ ಪಕ್ಷದ ಭದ್ರಕೋಟೆಯಾಗಿ ಮುದ್ದೇಬಿಹಾಳವನ್ನು ಕಾಯುತ್ತಿರುವ ಕೆ.ಎಸ್.ಡಿ.ಎಲ್ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡರು ಹೈಕಮಾಂಡ್‌ನ ನಿಷ್ಠಾವಂತ ಸಿಪಾಯಿ. 2013ರಲ್ಲೇ ಅವರಿಗೆ ಮಂತ್ರಿ ಸ್ಥಾನ ದಕ್ಕಬೇಕಿತ್ತು, ಆದರೆ ಅನಿವಾರ್ಯ ಕಾರಣಗಳಿಂದ ಅದು ಕೈತಪ್ಪಿದ್ದು ಇಡೀ ಜಿಲ್ಲೆಯ ಕಾರ್ಯಕರ್ತರಿಗೆ ಅತೀವ ನೋವು ತಂದಿತ್ತು. ಈ ಬಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹಳೆಯ ಅನ್ಯಾಯವನ್ನು ಸರಿಪಡಿಸಿ ನಾಡಗೌಡರಿಗೆ ಅರ್ಹ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಮಾತನಾಡಿದ ಅವರು, ಶಾಸಕ ಸಿ ಎಸ್ ನಾಡಗೌಡರು ಅಪ್ಪಾಜಿ ಅವರು ರಾಜವಂಶದ ಹಿನ್ನೆಲೆಯಿಂದ ಬಂದರೂ ಎಂದಿಗೂ ಬಡವ-ಶ್ರೀಮಂತ, ಮೇಲು-ಕೀಳು ಎಂಬ ತಾರತಮ್ಯ ಮಾಡಿದವರಲ್ಲ. ಬಡವರು, ದಲಿತರು ಹಾಗೂ ಹಿಂದುಳಿದ ವರ್ಗದವರ ಕಣ್ಣೀರೊರೆಸುವ ಮೂಲಕ ಅವರು 'ಅಪ್ಪಾಜಿ' ಎಂದೇ ಜನಪ್ರಿಯರಾಗಿದ್ದಾರೆ. ಇಂತಹ ನಾಯಕರಿಗೆ ಸಚಿವ ಸ್ಥಾನ ನೀಡಿದರೆ ಇಡೀ ವಿಜಯಪುರ ಜಿಲ್ಲೆಗೆ ಹಾಗೂ ಉತ್ತರ ಕರ್ನಾಟಕಕ್ಕೆ ಆನೆಬಲ ಬಂದಂತಾಗುತ್ತದೆ ಎಂದರು.

ಯುವ ಕಾಂಗ್ರೆಸ್ ಮುಖಂಡ ಸಿಂಕದರ್ ಜ್ವಾನೇಕಾರ ಮಾತನಾಡಿ, ಶಾಸಕ ಸಿಎಸ್ ನಾಡಗೌಡರ ಅನುಭವ ಸರ್ಕಾರಕ್ಕೆ ಆಸ್ತಿಯಾಗಲಿದೆ. ಸಚಿವ ಸ್ಥಾನದ ಬೇಡಿಕೆಯನ್ನು ಹೈಕಮಾಂಡ್ ಗಮನಕ್ಕೆ ತರಲು ಶೀಘ್ರದಲ್ಲೇ ಪಕ್ಷದ ಹಿರಿಯ ನಾಯಕರ ಬಳಿ ನಿಯೋಗ ಕೊಂಡೊಯ್ಯಲಾಗುವುದು ಎಂದು ತಿಳಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಫೀಕ್ ಶಿರೋಳ, ತಾಲ್ಲೂಕು ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜಾಕೀರ್ ಮೂಲಿಮನಿ, ರಾಮಣ್ಣ ನಾಯಕಮಕ್ಕಳು ಸೇರಿದಂತೆ ನೂರಾರು ಕಾರ್ಯಕರ್ತರು ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರ ನಿವಾಸಕ್ಕೆ ಜನಗಣತಿ ಅಧಿಕಾರಿಗಳು ಭೇಟಿ



**ಬೆಳಗಾವಿ ವಾರ್ತೆ ವಿಜಯಪುರ:** ವಿಜಯಪುರದಲ್ಲಿ ತಂಗಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಎಂ. ಬಿ. ಪಾಟೀಲ ಅವರ ನಿವಾಸಕ್ಕೆ ಭೇಟಿ ನೀಡಿದ ಜನಗಣತಿ ಅಧಿಕಾರಿಗಳು ಭಾರತ ಜನಗಣತಿ 2027ರ ಮಾಹಿತಿ ವಿವರಿಸಿದರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ, ವಲಯ ಆಯುಕ್ತರಾದ ಎಚ್.ಎಸ್. ಚಿತ್ತರಗಿ ಗಣತಿದಾರರಾದ ನೀಲಮ್ಮ ಸಜ್ಜನ ಹಾಗೂ ಮೇಲ್ವಿಚಾರಕರಾದ ಸಿದ್ದಪ್ಪ ದಾನಿ ಹಾಗೂ ಕಂದಾಯ ನಿರೀಕ್ಷಕರಾದ ಕುಮಾರ ಚವಾಣ್ ಉಪಸ್ಥಿತರಿದ್ದರು.

# 16–17ರಂದು ಶಂಕರಲಿಂಗೇಶ್ವರ ಜಾತ್ರೆ



**ಬೆಳಗಾವಿ ವಾರ್ತೆ ತಾಳಿಕೋಟೆ:** ಉತ್ತರ ಕರ್ನಾಟಕದ ಭಕ್ತಿ ಭಾವದ ಜಾತ್ರೆ ಸಂಸ್ಕೃತಿ, ಆಚಾರ-ವಿಚಾರಗಳ ಅನನ್ಯ ಸಂಗಮ. ತಾಳಿಕೋಟೆ ಸಮಿಪದ ಕೆಸರಟ್ಟಿ ಗ್ರಾಮದ ಘೋರತಪಸ್ವಿ ಶ್ರೀ ಶಂಕರಲಿಂಗೇಶ್ವರ ಮಹಾಸ್ವಾಮಿಗಳ 96 ನೇ ಜಾತ್ರಾ ಮಹೋತ್ಸವವು ಇದೇ ದಿ.16 ಮತ್ತು 17 ಎರಡುದಿನಗಳ ಕಾಲ ವಿಜೃಂಬಣೆಯಿಂದ ಜರುಗಲಿದೆ.

ಶ್ರೀಮಠದ ಪೂಜ್ಯ ಶ್ರೀ ಸೋಮಲಿಂಗ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಜರುಗಲಿರುವ ಈ ಜಾತ್ರೋತ್ಸವ ಅಂಗವಾಗಿ ಸುತ್ತಮುತ್ತಲಿನ ಹಾಲುಮತ ಬಂಜಾರ, ವಿವಿಧ ಸಮುದಾಯದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹರಕೆ ಸಮರ್ಪಿಸುತ್ತಾರೆ. ಮೇ. 16 ಶನಿವಾರ ಬಾದಮಿ ಅಮವಾಸ್ಯೆ ಬೆಳಗಿನ ಜಾವ 5 ಗಂಟೆಯಿಂದ 7 ಗಂಟೆವರಿಗೆ ಶ್ರೀ ಶಂಕರಲಿಂಗೇಶ್ವರ ಮಹಾಸ್ವಾಮಿಗಳ ಗದ್ದುಗೆಗೆ ಹಾಗೂ ಅಮೋಘಸಿದ್ದ ಮೂರ್ತಿಗೆ ಪೂಜಾ ಆರತಿ ಕಾರ್ಯಕ್ರಮ ಜರುಗಲಿದೆ. ಈ ಜಾತ್ರೆಯಲ್ಲಿ 101 ಡೊಳ್ಳಿನ ಕೈಪಟ್ಟು ವಾಲಗ ನೋಡುಗರ ಮನಸೇಳೆಯಲಿದೆ. ಪೂಜ್ಯರ ಭಾವಚಿತ್ರದ ಫಲ್ಲಕ್ಕಿ ಉತ್ಸವದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಲಿದೆ.

**ಪೂಜ್ಯಶ್ರೀಗಳ20ನೇ ತುಲಾಭಾರ ಹಾಗೂ ಪ್ರಶಸ್ತಿ ಪ್ರಧಾನ :** 96ನೇ ಜಾತ್ರಾ ಮಹೋತ್ಸವ ನಿಮಿತ್ತ ಮೇ 16 ರಂದು ಸಾಯಂಕಾಲ 6 ಗಂಟೆಗೆ ನಡೆಯುವ ಸಮಾರೋಪ ಸಭೆಯಲ್ಲಿ ಪೂಜ್ಯರು, ರಾಜಕೀಯ ಮುಖಂಡರು, ನೇತೃತ್ವದಲ್ಲಿ 2026 ನೇ ಸಾಲಿನ ಎಸ್ ಎಸ್ ಎಲ್ ಸಿ ಹಾಗೂ ಪಿ ಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸನ್ಮಾನ ಜರುಗಲಿದೆ.

ಶರಣರ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ನಡೆಯುವ 20ನೇ ತುಲಾಭಾರ ಕಾರ್ಯಕ್ರಮವು ಜರುಗಲಿದೆ.

ಮೆ 17 ರಂದು ಮುಂಜಾನೆ 7 ಗಂಟೆಗೆ ಗ್ರಾಮದ ಪ್ರಮುಖ ಬದಿಗಳಲ್ಲಿ ವಿವಿಧ ವಾದ್ಯ ವೈಭವದೊಂದಿಗೆ ಪಲ್ಲಕ್ಕಿ ಉತ್ಸವ ಜರಗಲಿದೆ. ಎಂದು ಶ್ರೀಮಠದ ಶ್ರೀ ಸೋಮಲಿಂಗ ಮಹಾಸ್ವಾಮಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಮುದ್ದೇಬಿಹಾಳದಲ್ಲಿ ಕಾಂಗ್ರೆಸ್ ವಿಜಯೋತ್ಸವ: ಪಟಾಕಿ ಸಿಡಿಸಿ ಸಂಭ್ರಮಿಸಿದ ಕಾರ್ಯಕರ್ತರು

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಬಾಗಲಕೋಟೆ, ದಾವಣಗೆರೆ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಮುನ್ನಡೆ ಹಾಗೂ ಕೇರಳ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಭರ್ಜರಿ ಯಶಸ್ಸನ್ನು ಖಂಡಿಸಿ, ಪಟ್ಟಣದ ಬಸವೇಶ್ವರ ಸರ್ಕಲ್‌ನಲ್ಲಿ ಮುದ್ದೇಬಿಹಾಳ ವಿಧಾನಸಭಾ ಮತಕ್ಷೇತ್ರದ ಓಖಗಖ, ಯುವ ಕಾಂಗ್ರೆಸ್ ಹಾಗೂ ಮಹಿಳಾ ಕಾಂಗ್ರೆಸ್ ವತಿಯಿಂದ ಮಂಗಳವಾರ ಅದ್ದೂರಿ ವಿಜಯೋತ್ಸವ ಆಚರಿಸಲಾಯಿತು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು, ಬಾಗಲಕೋಟೆ ಅಭ್ಯರ್ಥಿ ಉಮೇಶ್ ಮೇಟಿ ಹಾಗೂ ದಾವಣಗೆರೆ ಅಭ್ಯರ್ಥಿ ಸಮರ್ಥ ಶಿವಶಂಕರಪ್ಪ ಅವರ ಗೆಲುವಿನ ಆಶಯದೊಂದಿಗೆ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಇದೇ ವೇಳೆ ಕಾಂಗ್ರೆಸ್ ಪಕ್ಷದ ಪರವಾಗಿ ಘೋಷಣೆಗಳನ್ನು ಕೂಗಿ ವಿಜಯದ ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಎನ್ ಎಸ್ ಯುಐ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ, ಕಾಂಗ್ರೆಸ್ ಮುಖಂಡ ಸಿಕಂದರ್ ಜಾನ್ವೇಕರ, ವಿಜಯಪುರ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಫೀಕ್ ಶಿರೋಳ, ಮುಖಂಡರಾದ ರಾಮಣ್ಣ ರಾಜನಾಳ, ನಾಗೇಶ್ ಬಂಜೆತ್ರಿ, ದೇವಪ್ಪ ವಾಲಿಕಾರ,ಯುವ ಕಾಂಗ್ರೆಸ್ ಉಪಾಧ್ಯಕ್ಷ ಸಮೀರ್ ದ್ರಾಕ್ಷಿ, ಮುಖಂಡರಾದ ಸುಚಿತ್ ಚಳಗೇರಿ, ಮುದ್ದೇಬಿಹಾಳ



ಓಖಗಖ ಅಧ್ಯಕ್ಷ ಅಬೂಬಕರ್ ಹಡಗಲಿ, ಕಯುಮ್ ಮೊಮಿನ್, ಅಶ್ಫಾಕ್ ಢವಳಗಿ ಹಾಗೂ ಮಹಿಳಾ ಕಾಂಗ್ರೆಸ್ ಮುಖಂಡರಾದ ಸುಜಾತಾ ಶಿಂಧೆ, ಮಹಾಬುಬಿ ಬಾಗವಾನ, ನೀಲಮ್ಮ ಚಲವಾದಿ, ರೇಷ್ಮೆ ನದಾಫ, ಹೀನಾ ಕೌಸರ್ ಸೇರಿದಂತೆ ಹತ್ತಾರು ಕಾರ್ಯಕರ್ತರು ಈ ವಿಜಯೋತ್ಸವದಲ್ಲಿ ಭಾಗವಹಿಸಿದ್ದರು.

# ಹೆಚ್ಚಿನ ತಾಪಮಾಣ : ಅನಾರೋಗ್ಯ ತಡೆಗೆ ಸಲಹೆಗಳು

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ 2026ರ ಬೇಸಿಗೆ ಕಾಲದ ತಾಪಮಾನದ ಅವಧಿಯಲ್ಲಿ ರಾಜ್ಯದ ಬಹುತೇಕ ಭಾಗಗಳಲ್ಲಿ ಗರಿಷ್ಟ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುವ ಸಾಧ್ಯತೆ ಇದ್ದು, ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ವಿಶೇಷವಾಗಿ ಮಕ್ಕಳು, ವೃದ್ದರು ಮತ್ತು ಅನಾರೋಗ್ಯ ಪೀಡಿತರ ಮೇಲೆ ಗಂಭೀರ ಪರಿಣಾಮ ಬೀರಲಿದೆ. ಬಿಸಿಲಿನಿಂದ ಉಂಟಾಗುವ ಬಳಲಿಕೆ, ನಿರ್ಜಲೀಕರಣ ತಡೆಗಟ್ಟಲು ಮತ್ತು ತಗ್ಗಿಸಲು ಭಾರತೀಯ ಹವಾಮಾನ ಇಲಾಖೆಯು ನೀಡಿದ ಸಲಹೆ, ಸೂಚನೆಗಳನ್ನು ಅನುಸರಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅವರು ತಿಳಿಸಿದ್ದಾರೆ.

**ಅನಾರೋಗ್ಯ ತಡೆಗೆ ಸಲಹೆಗಳು :**

ಸಾಧ್ಯವಾದಷ್ಟು ಮಟ್ಟಿಗೆ ವಿಶೇಷವಾಗಿ ಗರಿಷ್ಟ ತಾಪಮಾನದ ಅವಧಿಯಲ್ಲಿ ಮಧ್ಯಾಹ್ನ 12 ರಿಂದ 3 ಗಂಟೆವರೆಗೆ ಬಿಸಿನಲ್ಲಿ ಹೋಗುವುದನ್ನು ತಪ್ಪಿಸಬೇಕು. ಬಾಯಾರಿಕೆ ಇಲ್ಲದಿದ್ದರೂ ಸಹ ಸಾಕಷ್ಟು ನೀರು ಕುಡಿಯಬೇಕು. ಹಗುರವಾದ, ತಿಳಿ ಬಣ್ಣದ ಸಡಿಲವಾದ ಮತ್ತು ಹತ್ತಿ ಬಟ್ಟೆಗಳನ್ನು ಧರಿಸುವುದು, ಬಿಸಿಲಿನಲ್ಲಿ ಕನ್ನಡಕಗಳು, ಛತ್ರಿ, ಟೋಪಿ, ಬೂಟಗಳು ಅಥವಾ ಚಪ್ಪಲಿಗಳನ್ನು ಬಳಸಬೇಕು. ಈ ಅವಧಿಯಲ್ಲಿ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಬೇಕು. ಪ್ರಯಾಣ ಮಾಡುವಾಗ ನೀರನ್ನು ಜೊತೆಯಲ್ಲಿ ಒಯ್ಯುವುದು, ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೆಟೆಡ್ ತಂಪು ಪಾನೀಯಗಳನ್ನು ತಪ್ಪಿಸಬೇಕು.

ಸಾಧ್ಯವಾದಷ್ಟು ಬಿಸಿ ಆಹಾರವನ್ನು ಸೇವಿಸುವದರ ಜೊತೆಗೆ ನಿಲ್ಲಿಸಿದ ವಾಹಗಳಲ್ಲಿ ಮಕ್ಕಳನ್ನು, ಸಾಕುಪ್ರಾಣಿಗಳನ್ನು ಬಿಡಬಾರದು. ಮೂರ್ಛೆ ಅಥವಾ ಅನಾರೋಗ್ಯ ಅನಿಸಿದರೆ, ತಕ್ಷಣ ವೈದ್ಯರನ್ನು ಭೇಟಿ ಮಾಡಬೇಕು. ನಿಂಬೆ ನೀರು, ಮಜ್ಜಿಗೆ ಮುಂತಾದ ಮನೆಯಲ್ಲಿ ತಯಾರಿಸಿದ ಪಾನೀಯಗಳು ಮತ್ತು ಓಆರ್‌ಎಸ್ ಅನ್ನು ಬಳಸಬೇಕು. ಹೆಚ್ಚಿನ ನೀರಿನ ಅಂಶವನ್ನು ಹೊಂದಿರುವ ಹಣ್ಣು ಹಾಗೂ ತರಕಾರಿಗಳು, ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನಾನಸ್, ಸೌತೆಕಾಯಿ, ತರಕಾರಿ ಸೊಪ್ಪು, ಎಳೆನೀರುಗಳನ್ನು ಹೆಚ್ಚಾಗಿ ಸೇವಿಸಬೇಕು.

ಮನೆಯನ್ನು ಸಂಪಾಗಿರಿಸಲು ಪರದೆಗಳು, ಶಟರಗಳು ಅಥವಾ ಸನ್‌ಶೇಡ್‌ಗಳನ್ನು ಬಳಸುವುದು, ಹೊರಗೆ ಹೋಗುವಾಗ ನೀರಿನ ಬಾಟಲಿ, ಛತ್ರಿ, ಟೋಪಿ, ಕ್ಯಾಪ್, ಹೆಡ್ ಕವರ್, ಹ್ಯಾಂಡ್ ಟವಲ್, ಎಲೆಕ್ಟ್ರೋಲೈಟ್, ಗ್ಲೂಕೋಸ್, ಓಆರ್‌ಎಸ್ ಒಳಗೊಂಡಿರುವ ಅತೀ ಹೆಚ್ಚು ತಾಪಮಾನವನ್ನು ತಡೆಗಟ್ಟುವ ಕಿಟ್ ಒಯ್ಯುವದನ್ನು ಪ್ರೋತ್ಸಾಹಿಸಬೇಕು. ಅಲ್ಲದೇ ಆರೋಗ್ಯ ಇಲಾಖೆಯಿಂದ ಆಗಿಂದಾಗ್ಗೆ ನೀಡುವ ಮಾರ್ಗಸೂಚಿಗಳನ್ನು ಪಾಲಿಸಲು ತಿಳಿಸಿದ್ದಾರೆ.

**ಹೆಚ್ಚಿನ ತಾಪಮಾನಕ್ಕೆ ಸಂಬಂಧಿಸಿದ ಕಾಯಿಲೆಗೆ ಪ್ರಥಮ ಚಿಕಿತ್ಸೆ :**

ಅತೀ ಹೆಚ್ಚು ತಾಪಮಾನದಿಂದ ತುತ್ತಾದ ವ್ಯಕ್ತಿಯನ್ನು ನೆರಳಿನ ಅಡಿಯಲ್ಲಿ ತಂಪಾದ ಸ್ಥಳಕ್ಕೆ ಸ್ಥಳಾಂತರಿಸಿ ಒದ್ದೆ ಬಟ್ಟೆಯಿಂದ ಮೈ ಒರೆಸುವುದು, ದೇಹದ ಉಷ್ಣತೆಯನ್ನು ತಗ್ಗಿಸಿ ತಲೆಯ ಮೇಲೆ ನೀರನ್ನು ಹಾಕುವುದು. ನೀರು, ಪುನರ್ಜಲಿಕರಣ ಪಾನೀಯಗಳಾದ ಓಆರ್‌ಎಸ್, ನಿಂಬೆಪಾನಕ ನೀಡಬೇಕು (ವ್ಯಕ್ತಿ ಪ್ರಜ್ಞೆ ಹೊಂದಿದ್ದರೆ), ವ್ಯಕ್ತಿಗೆ ತಂಪಾದ ಗಾಳಿಯ ವ್ಯವಸ್ಥೆ, ರೋಗ ಲಕ್ಷಣಗಳು ಉಲ್ಬಣಗೊಂಡಲ್ಲಿ ಧೀರ್ಘಕಾಲದವರೆಗೆ ಇದ್ದರೆ ವೈದ್ಯರನು ಸಂಪರ್ಕಿಸಬೇಕು. ಮದ್ಯಪಾನ, ಕಾಫಿ, ಶೇಖರಿಸಿದ ಪಾನೀಯವನ್ನು ನೀಡಬಾರದು. ಉತ್ತಮ ಗಾಳಿಗಾಗಿ ಬಟ್ಟೆಗಳನ್ನು ಸಡಿಲಗೊಳಿಸಬೇಕು. ಅಲ್ಲದೇ ಆರೋಗ್ಯ ಇಲಾಖೆಯಿಂದ ನೀಡುವ ಸಲಹೆಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಕಸಾಪ ಸಂಸ್ಥಾಪನಾ ದಿನಾಚರಣೆ



**ಬೆಳಗಾವಿ ವಾರ್ತೆ ವಿಜಯಪುರ:** ಕನ್ನಡ ಉಳಿಗಾಗಿ ನಾವು ಒಂದಾಗ ಬೇಕಿದ್ದು, ಬೇರೆ ಬೇರೆ ಭಾಷೆಯಿಂದ ಕನ್ನಡ ಮರೆಯಾಗು ತ್ತಿರುವುದು ನೋವಿನ ಸಂಗತಿ. ಆದಕ್ಕಾಗಿ ಪ್ರತಿಯೊಬ್ಬರೂ ಪ್ರತಿಜ್ಞೆ ಮಾಡಿ, ಕನ್ನಡ ಉಳಿವಿಗಾಗಿ ಹೋರಾಟ ಮಾಡಬೇಕು ಎಂದುರೈತ ಹೋರಾಟಗಾರ್ತಿ ಸಂಗೀತಾರಾಠೋಡ ಹೇಳಿದರು.

ನಗರದಲ್ಲಿ ಬಬಲೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನಡೆದ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವವನ್ನು ಉದ್ಘಾಟಿಸಿ ಮಾತನಾಡಿದರು.

ಅಧ್ಯಕ್ಷ ವಹಿಸಿದ್ದ ಬಬಲೇಶ್ವರ ಕಸಾಪ ತಾಲೂಕುಅಧ್ಯಕ್ಷ ಹಾಗೂ ಪತ್ರಕರ್ತ ಖಾಜಾಮೈನುದ್ದೀನ್ ಪಟೇಲ್ ಮಾತನಾಡಿ, ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ಸಂರಕ್ಷಣೆಗಾಗಿ ಜನ್ಮತಾಳಿದ ಏಕೈಕ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು. ಸುಮಾರು ಒಂದು ಶತಮಾನಕ್ಕೂ ಅಧಿಕ ಇತಿಹಾಸವಿರುವ ಈ ಸಂಸ್ಥೆಯು ಕೇವಲ ಒಂದು ಕಟ್ಟಡವಲ್ಲ, ಅದು ಏಳು ಕೋಟಿ ಕನ್ನಡಿಗರ ಭಾವನಾತ್ಮಕ ಕೇಂದ್ರವಾಗಿದೆ. 1915ರ ಮೇ 5ರಂದು ಸ್ಥಾಪನೆಯಾದ ಈ ಪರಿಷತ್ತುಅಂದು ಹಾಕಿದ ಅಡಿಪಾಯಇಂದು ಮಹಾವೃಕ್ಷವಾಗಿ ಬೆಳೆದು ನಿಂತಿದೆಎಂದರು.

ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಈ ಸಂಸ್ಥೆಯ ಮುಖ್ಯಗುರಿಯಾಗಿದೆ. ಇದು ಪ್ರತಿ ವರ್ಷ ಅಖಿಲ ಭಾರತಕನ್ನಡ ಸಾಹಿತ್ಯ ಸಮ್ಮೇಳನವನ್ನು ನಾಡಿನ ವಿವಿಧೆಡೆಆಯೋಜಿಸುತ್ತದೆ. ಹೊಸ ಬರಹಗಾರರನ್ನು ಪ್ರೊತ್ಸಾಹಿಸುವುದು, ಹಳೆಯ ಅಮೂಲ್ಯ ಕೃತಿಗಳನ್ನು ಮರು ಮುದ್ರಣ ಮಾಡುವುದು ಮತ್ತುಕನ್ನಡ ನಾಡು–ನುಡಿಗೆ ಸಂಬಂಧಿಸಿದ ಚಳುವಳಿಗಳಿಗೆ ಬೆಂಬಲ ನೀಡುವುದು ಪರಿಷತ್ತಿನ ಪ್ರಮುಖ ಕಾರ್ಯವಾಗಿದೆ ಎಂದರು.

ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ, ಬಬಲೇಶ್ವರದ ಕರ್ನಾಟಕ ರಾಜ್ಯರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಮಕಬುಕೇಜಿ, ಶರಣ ಚಿಂತಕ ರಾಜುಗೌಡ ಬಿರಾದಾರ, ಕಸಾಪ ಪದಾಧಿಕಾರಿ ಮೀರಾಸಾಬ ದಳವಾಯಿ, ಮಹಾದೇವ ಹರಿಜನ, ರೇಖಾ ಬಿರಾದಾರ, ಜಾವೀನ್ ಇನಾಮದಾರ, ಚಂದ್ರು ಚಲವಾದಿ ಪಾಲ್ಗೊಂಡಿದ್ದರು.

# ಅಸ್ಸಾಂ ಮತ್ತು ಪ. ಬಂಗಾಳದಲ್ಲಿ ಬಿಜೆಪಿ ಗೆಲುವಲ್ಲ, ಅದು ಚುನಾವಣಾ ಆಯೋಗದ ಜಯ: ಪ್ರಿಯಾಂಕ್ ಖರ್ಗೆ

**ಬೆಳಗಾವಿ ವಾರ್ತೆ ಬೆಂಗಳೂರು:** ಪಶ್ಚಿಮ ಬಂಗಾಳದಲ್ಲಿ SIR ಪ್ರಕ್ರಿಯೆಯಲ್ಲಿ 91 ಲಕ್ಷ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಟ್ಟಿರುವುದೂ ಸೇರಿದಂತೆ ಚುನಾವಣಾ ಆಯೋಗದ ಹಲವು ಕ್ರಮಗಳೇ ಬಿಜೆಪಿ ಗೆಲುವಿಗೆ ಕಾರಣವಾಯಿತು, ಚುನಾವಣಾ ಆಯೋಗ ಬಿಜೆಪಿ ಕೈಯೊಳಗಿದೆ ಎಂದು ಕರ್ನಾಟಕದ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ಅಸ್ಸಾಂ ಮತ್ತು ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಗೆಲುವು ಆ ಪಕ್ಷದ ಗೆಲುವಲ್ಲ. ಅದು ಚುನಾವಣಾ ಆಯೋಗದ ಗೆಲುವು. ಚುನಾವಣಾ ಆಯೋಗವನ್ನು ಜೇಬಿನಲ್ಲಿ ಇಟ್ಟುಕೊಂಡು ಚುನಾವಣೆ ನಡೆಸಿದ್ದರು ಎಂದು ಖರ್ಗೆ ಆರೋಪಿಸಿದ್ದಾರೆ. ಈ ಹಿಂದೆ ಮಧ್ಯಪ್ರದೇಶ, ಹರಿಯಾಣದಲ್ಲಿ, ಲೋಕಸಭೆ ಚುನಾವಣೆಯಲ್ಲಿ ಕೂಡ ಹೀಗೆಯೇ ಆಗಿತ್ತು ಎಂದರು.

ಸುಮಾರು ಒಂದು ಕೋಟಿ ಜನರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ. 27 ರಿಂದ 28 ಲಕ್ಷ ಅರ್ಹ ಜನರು ಟ್ರಿಬ್ಯುನಲ್‌ಗಳಿಗೆ ಅರ್ಜಿ ಸಲ್ಲಿಸಿದರೂ ಅವರ ವಾದವನ್ನು ಆಲಿಸಲಾಗಿಲ್ಲ.

ಪಶ್ಚಿಮ ಬಂಗಾಳದಲ್ಲಿ ಶೇ 4ರಷ್ಟು ವ್ಯತ್ಯಾಸದಿಂದ 80 ರಿಂದ 100 ಸ್ಥಾನಗಳ ಮೇಲೆ ಪರಿಣಾಮ ಬೀರಿದೆ.

ಮಹಾರಾಷ್ಟ್ರ, ಮಧ್ಯಪ್ರದೇಶ ಮತ್ತು ಹರಿಯಾಣದಲ್ಲಿ ಇದೇ ರೀತಿಯಲ್ಲಿ ಬಿಜೆಪಿ ಚುನಾವಣಾ





ಪ್ರಕ್ರಿಯೆಯನ್ನು ನಿಯಂತ್ರಿಸಿತ್ತು ಎಂದು ಅವರು ಆರೋಪಿಸಿದ್ದಾರೆ. ಕರ್ನಾಟಕದಲ್ಲೂ ಇದೇ ರೀತಿ ಆಗಬಹುದು ಎಂದು ಕೂಡ ಹೇಳಿದರು.

ತಮಿಳು ನಾಡಿನಲ್ಲಿ ನಾವು ಹೆಚ್ಚಿನ ಸ್ಥಾನ ಗೆಲ್ಲುವ ನಿರೀಕ್ಷೆಯಲ್ಲಿದ್ದೆವು. ಜನರು ಅವರ ತೀರ್ಪು ಕೊಟ್ಟಿದ್ದಾರೆ.

ನೋಡೋಣ ಮುಂದೆ ಏನಾಗುತ್ತದೆ ಎಂದರು.

# ಮಹಿಳಾ ವಿವಿ ಮಹತ್ತರ ಸಾಧನೆ: ಮಾಜಿ ಕುಲಪತಿ ಪ್ರೊ.ಮೀನಾ ಚಂದಾವರಕರ ಪ್ರಶಂಸೆ



**ಬೆಳಗಾವಿ ವಾರ್ತೆ ವಿಜಯಪುರ:** ಕಳೆದ 10 ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾನಿಲಯು ಮಹತ್ತರ ಸಾಧನೆ ಮಾಡಿದ್ದು ಪ್ರಗತಿ ಪಥ ದತ್ತ ಸಾಗುತ್ತಿದೆ ಎಂದು ಮಾಜಿ ಕುಲಪತಿ ಹಾಗೂ ಟ್ರಿಪಲ್ ಎ ಉನ್ನತ ಮಟ್ಟದ ತಜ್ಞರ ತಂಡದ ಮುಖ್ಯಸ್ಥೆ ಪ್ರೊ.ಮೀನಾ ಚಂದಾವರಕರ ಸಂತಸ ವ್ಯಕ್ತಪಡಿಸಿದರು.

ಇಲ್ಲಿಯ ಮಹಿಳಾ ವಿಶ್ವವಿದ್ಯಾನಿಲಯದ ಮುಖ್ಯ ಅವರಣದಲ್ಲಿ ಕಳೆದ ಎರಡು ದಿನಗಳಿಂದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಪರಿಶೀಲನೆ ನಡೆಸಿದ ನಂತರ ಮಂಗಳವಾರ ನಡೆದ ಎಎಎ ಕಮಿಟಿಯ ನಿರ್ಗಮನ ಸಭೆಯಲ್ಲಿ ಮಾತನಾಡಿದರು.

ಮಹಿಳಾ ವಿಶ್ವವಿದ್ಯಾನಿಲಯು ಭೌತಿಕವಾಗಿ, ಶೈಕ್ಷಣಿಕವಾಗಿ ಮತ್ತು ಮೂಲ ಸೌಕರ್ಯಗಳ ದೃಷ್ಟಿಯಿಂದ ಸಾಕಷ್ಟು ಪ್ರಗತಿ ಸಾಧಿಸಿದೆ. ಹಲವಾರು ಸಮಸ್ಯೆಗಳು ಮತ್ತು ಸವಾಲುಗಳ ಮಧ್ಯೆಯೂ ಈ ಸಾಧನೆ ಮಾಡಿರುವುದು ಅತ್ಯಂತ ಪ್ರಶಂಸನೀಯ ಎಂದು ಅವರು ಹೇಳಿದರು.

ಮಹಿಳಾ ವಿಶ್ವವಿದ್ಯಾನಿಲಯ ಪ್ರಗತಿ ಪಥದತ್ತ ಸಾಗುತ್ತಿದ್ದರೂ ಇನ್ನೂ ಹಲವಾರು ಸಮಸ್ಯೆ ಮತ್ತು ಸವಾಲುಗಳಿವೆ. ಇವುಗಳಲ್ಲಿ ಮುಖ್ಯವಾಗಿ ಇತ್ತೀಚಿನ ವರ್ಷಗಳಲ್ಲಿ ಖಾಯಂ ಬೋಧಕರ ಹುದ್ದೆ ಬಹಷ್ಟು ಖಾಲಿ ಉಳಿದಿದ್ದು ಈ ಕಾರ್ಯಭಾರವನ್ನು ಅತಿಥಿ ಉಪನ್ಯಾಸಕರು ನಿಭಾಯಿಸುತ್ತಿದ್ದಾರೆ. ಇದು ಶೈಕ್ಷಣಿಕ ಗುಣಮಟ್ಟದ ಮೇಲೆ ವ್ಯತಿರಿಕ್ತ ಪರಿಣಾಮಗಳನ್ನು ಬೀರುತ್ತಿದೆ. ಆದ್ದರಿಂದ ಆದಷ್ಟು ಬೇಗ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ವಿಶ್ವವಿದ್ಯಾನಿಲಯದ ಆಡಳಿತ ಮುಂದಾಗಬೇಕು ಎಂದು ಅವರು ಸಲಹೆ ನೀಡಿದರು.

ಮಹಿಳಾ ವಿವಿಯ ಕೆಲವು ವಿಭಾಗಗಳಲ್ಲಿ ವಿದ್ಯಾರ್ಥಿನಿಯರ ಪ್ರವೇಶ ಕಡಿಮೆ ಇದ್ದು ಈ ವಿಭಾಗಗಳಲ್ಲಿ ವಿದ್ಯಾರ್ಥಿನಿಯರು ಹೆಚ್ಚಿನ ಪ್ರಮಾಣದಲ್ಲಿ ಪ್ರವೇಶ ಪಡೆದುಕೊಳ್ಳಲು ಅಗತ್ಯ ಕ್ರಮಗಳನ್ನು ಕೈಕೊಳ್ಳಬೇಕು. ವಿವಿಯ ಮುಖ್ಯ ಆವರಣದಲ್ಲಿ ಆರಂಭಿಸಿರುವ ಸ್ನಾತಕ ಪದವಿ ಕೋರ್ಸ್ಗಳಿಗೆ ಬೇಡಿಕೆ ಹೆಚ್ಚುತ್ತಿರುವುದರಿಂದ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಕೊಳ್ಳಬೇಕು ಎಂದೂ ಅವರು ಸಲಹೆ ಮಾಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ.ವಿಜಯಾ ಕೋರಿಶೆಟ್ಟಿ ಮಾತನಾಡಿ, ಕಳೆದ ಎರಡು ದಿನಗಳಲ್ಲಿ, ನಮ್ಮ ವಿವಿಯ ಆವರಣದಲ್ಲಿ ಟ್ರಿಪಲ್ ಎ ತಂಡದ ಭೇಟಿಯು ಪ್ರೋತ್ಸಾಹದಾಯಕ ಮತ್ತು ಸ್ಫೂರ್ತಿದಾಯಕವಾಗಿತ್ತು. ನಮ್ಮ ಅಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಆಡಳಿತ ತಂಡಗಳೊಂದಿಗಿನ ನಡೆಸಿದ ಸಂವಹನವು ನಮ್ಮ ಸಾಧನೆಗಳನ್ನು ಪ್ರಸ್ತುತಪಡಿಸಲು ನಮಗೆ ಅವಕಾಶವನ್ನು ಒದಗಿಸಿದೆ, ಜೊತೆಗೆ ನಮ್ಮ ಅತ್ಯುತ್ತಮ ಅಭ್ಯಾಸಗಳು, ಆಡಳಿತ, ವಿಸ್ತರಣಾ ಚಟುವಟಿಕೆಗಳು, ವ್ಯವಸ್ಥೆಗಳು ಮತ್ತು ಭವಿಷ್ಯದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸಲು ನಮಗೆ ಅವಕಾಶ ಮಾಡಿಕೊಟ್ಟಿದೆ ಎಂದರು.

ನಮ್ಮ ವಿಶ್ವವಿದ್ಯಾನಿಲಯವು ಯಾವಾಗಲೂ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣಾ ಸೇವೆಗಳನ್ನು ಅತ್ಯಂತ ಗಂಭೀರವಾಗಿ ಮುನ್ನಡೆಸುವ ತನ್ನ ಪ್ರಮುಖ ಧ್ಯೇಯಕ್ಕೆ ಬದ್ಧವಾಗಿದೆ, ವಿಶೇಷವಾಗಿ ಎಲ್ಲಾ ಅಂಶಗಳಲ್ಲಿ ಮಹಿಳೆಯರನ್ನು ಸಬಲೀಕರಣಗೊಳಿಸುವತ್ತ ಗಮನಹರಿಸುತ್ತದೆ. ಶಿಕ್ಷಣವು ಪರಿವರ್ತಕ ಶಕ್ತಿಯಾಗಿದೆ ಎಂಬ ನಂಬಿಕೆಯಲ್ಲಿ ನಮ್ಮ ದೃಷ್ಟಿಕೋನ ಬೇರೂರಿದೆ ಅದು ವ್ಯಕ್ತಿಗಳನ್ನು ಉನ್ನತೀಕರಿಸಬಹುದು, ಸಮುದಾಯಗಳನ್ನು ಬಲಪಡಿಸಬಹುದು ಮತ್ತು ರಾಷ್ಟ್ರೀಯ ಅಭಿವೃದ್ಧಿಗೆ ಅರ್ಥಪೂರ್ಣವಾಗಿ ಕೊಡುಗೆ ನೀಡಬಹುದು ಎಂಬುದು ನಮ್ಮ ವಿಶ್ವವಿದ್ಯಾನಿಲಯದ ಧ್ಯೇಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಟ್ರಿಪಲ್ ಎ ತಂಡದ ಭೇಟಿಯ ಸಮಯದಲ್ಲಿ, ನಮ್ಮ ಶೈಕ್ಷಣಿಕ ಕಾರ್ಯಕ್ರಮಗಳು, ಸಂಶೋಧನಾ ಉಪಕ್ರಮಗಳು, ವಿಸ್ತರಣಾ ಚಟುವಟಿಕೆಗಳು ಮತ್ತು ವಿದ್ಯಾರ್ಥಿ ಬೆಂಬಲ ವ್ಯವಸ್ಥೆಗಳನ್ನು ಪ್ರದರ್ಶಿಸಲು ನಮಗೆ ಅವಕಾಶ ಸಿಕ್ಕಿತು. ನಾವೀನ್ಯತೆ, ವಿಮರ್ಶಾತ್ಮಕ ಚಿಂತನೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಪೋಷಿಸುವ ರೋಮಾಂಚಕ ಶೈಕ್ಷಣಿಕ ವಾತಾವರಣವನ್ನು ನಿರ್ಮಿಸುವಲ್ಲಿ ನಾವು ಇತ್ತೀಚಿನ ವರ್ಷಗಳಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಕುಲಪತಿ ಪ್ರೊ.ವಿಜಯಾ ತಿಳಿಸಿದರು.

ಟ್ರಿಪಲ್ ಎ ತಂಡದ ಅವಲೋಕನಗಳು, ಒಳನೋಟಗಳು ಮತ್ತು ಶಿಫಾರಸುಗಳು ನಮಗೆ ಅಮೂಲ್ಯವಾಗಿವೆ. ಈ ರೀತಿಯ ಬಾಹ್ಯ ಮೌಲ್ಯಮಾಪನವು ನಮ್ಮ ವಿವಿಯ ಸಾಮರ್ಥ್ಯಗಳನ್ನು ಗುರುತಿಸಲು, ಅಂತರವನ್ನು ನಿವಾರಿಸಲು ಮತ್ತು ವಿಕಸನಗೊಳ್ಳುತ್ತಿರುವ ಶೈಕ್ಷಣಿಕ ಮತ್ತು ಸಾಮಾಜಿಕ ನಿರೀಕ್ಷೆಗಳೊಂದಿಗೆ ನಮ್ಮನ್ನು ಹೊಂದಿಸಿಕೊಳ್ಳಲು ಸಹಾಯ ಮಾಡುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. ಟ್ರಿಪಲ್ ಎ ತಂಡದ ಪ್ರತಿಕ್ರಿಯೆಯನ್ನು ನಾವು ಎಚ್ಚರಿಕೆಯಿಂದ ಪರಿಗಣಿಸುತ್ತೇವೆ ಮತ್ತು ಅರ್ಥಪೂರ್ಣ ಸುಧಾರಣೆಗಳನ್ನು ಕಾರ್ಯಗತಗೊಳಿಸಲು ನಿಶ್ಚಿತ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ ಎಂದು ಅವರು ಭರವಸೆ ನೀಡಿದರು.

ನಿರ್ಗಮನ ಸಭೆಯಲ್ಲಿ ಎಎಎ ಕಮಿಟಿಯ ಸದಸ್ಯರಾದ ಕಲಬುರಗಿ ವಿಶ್ವವಿದ್ಯಾನಿಲಯದ ಗಣಿತ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಎನ್.ಬಿ.ನಡವಿನಮನಿ, ಧಾರವಾಡದ ಕರ್ನಾಟಕ ವಿಶ್ವವಿದ್ಯಾನಿಲಯದ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಪ್ರೊ.ಬಿ.ಎಚ್.ನಾಗೂರ ಮತ್ತು ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾನಿಲಯದ ಇಂಗ್ಲಿಷ್ ವಿಭಾಗದ ಪ್ರಾಧ್ಯಾಪಕ ಪ್ರೊ.ಬಸವರಾಜ ಡೋಣೂರು, ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಪ್ರೊ.ಬಿ.ಎಲ್.ಲಕ್ಕಣ್ಣವರ, ಆರ್ಥಿಕ ಅಧಿಕಾರಿ ರಾಮಣ್ಣ ಅಥಣಿ, ಐಕ್ಯುಎಸಿ ನಿರ್ದೇಶಕಿ ಪ್ರೊ.ಶಾಂತಾದೇವಿ, ಡೀನರುಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕ ಸಿಬ್ಬಂದಿ ಉಪಸ್ಥಿತರಿದ್ದರು.

# ಗರ್ಭಿಣಿಯರ ಆರೈಕೆ, ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು: ಜಿಲ್ಲಾಧಿಕಾರಿ ಡಾ. ಆನಂದ ಕೆ. ಸೂಚನೆ

**ಬೆಳಗಾವಿ ವಾರ್ತೆ ವಿಜಯಪುರ:** ರಾಷ್ಟ್ರೀಯ ಆರೋಗ್ಯ ಅಭಿಯಾನ ಮತ್ತು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಯೋಜನೆಯನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಗರ್ಭಿಣಿಯರ ಆರೈಕೆ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗರ್ಭಿಣಿಯರ ಆರೋಗ್ಯ ತಪಾಸಣೆಯನ್ನು 12 ರಿಂದ 14 ಬಾರಿ ನಿಯಮಿತವಾಗಿ ಕೈಗೊಳ್ಳಬೇಕು. ಅನಿಮಿಯಾ, ಅಧಿಕ ರಕ್ತದೊತ್ತಡ, ಮಾನಸಿಕ ಆರೋಗ್ಯ ಮತ್ತು ವಿವಿಧ ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿ ಗುರುತಿಸಿ ಉಚಿತ ಆರೋಗ್ಯ ಚಿಕಿತ್ಸೆಯನ್ನು ಒದಗಿಸಬೇಕು ಎಂದರು.

ಜಿಲ್ಲೆಯಲ್ಲಿ ತಾಯಿ–ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಆರ್.ಸಿ.ಹೆಚ್ ತಂತ್ರಾಂಶದಲ್ಲಿ ಗರ್ಭಿಣಿಯರಿಗೆ ಕಾಲ–ಕಾಲಕ್ಕೆ ಆರೋಗ್ಯದ ಕುರಿತು ತಿಳಿವಳಿಕೆ ನೀಡುವಂತೆ ಸೂಚನೆ ನೀಡಿದರು. ಹೆರಿಗೆಯ ನಂತರ ಮಗುವಿಗೆ ಒಂದು ವರ್ಷ ತುಂಬುವವರೆಗೆ ಪಡೆದುಕೊಳ್ಳಬೇಕಾದ ಚಿಕಿತ್ಸೆ, ಔಷಧೋಪಚಾರ, ಲಸಿಕೆ ಸೌಲಭ್ಯಗಳ ಮಾಹಿತಿಯನ್ನು ಒದಗಿಸಬೇಕು. ಜೊತೆಗೆ ಆರೋಗ್ಯ ಸೇವಾ ಸೌಲಭ್ಯಗಳ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಗರ್ಭಿಣಿಯರ ಅಗತ್ಯ ಮಾಹಿತಿಯನ್ನು ನಿಯಮಿತವಾಗಿ ನೋಂದಣಿ ಮಾಡಬೇಕು. ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ, ಗಂಡಾಂತರ ಗರ್ಭಿಣಿಯರು ಕಂಡುಬಂದರೆ ಅಂತಹವರಿಗೆ ಸಕಾಲದಲ್ಲಿ ಆರೋಗ್ಯ ಸೇವೆ ನೀಡಬೇಕು. ಯಾವುದೇ ಕಾರಣಕ್ಕೆ ಗರ್ಭಿಣಿ ಹಾಗೂ ಮಕ್ಕಳನ್ನು ನಿರ್ಲಕ್ಷಿಸಬಾರದು ಎಂದರು. ಕುಟುಂಬ ಕಲ್ಯಾಣ ಯೋಜನೆಯ ಬಗ್ಗೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಹಾಗೂ ಸಮುದಾಯ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ತಾಲೂಕಾ ಮಟ್ಟದಲ್ಲಿ ತರಬೇತಿಯನ್ನು ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳು ಸೇರಿದಂತೆ ಎಲ್ಲ ವೈದ್ಯರಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು ಗರ್ಭಿಣಿಯರು, ಅನಾರೋಗ್ಯ ಪೀಡಿತರು ಮತ್ತು ಬಹಳ ಸಮಯದಿಂದ ಔಷಧಿ ಸೇವಿಸುತ್ತಿರುವವರು ಬಿಸಿಲಿನಲ್ಲಿ ಹೆಚ್ಚು ಪರಿಶ್ರಮ ಮಾಡುವುದನ್ನು ತಪ್ಪಿಸಬೇಕು. ಬಿಸಿಗಾಳಿಯ ಸಂದರ್ಭದಲ್ಲಿ ದೇಹದ ನೀರಿನಾಂಶ ಕಡಿಮೆಯಾದಲ್ಲಿ ಸೂರ್ಯಘಾತ ಆಗುವ ಸಾಧ್ಯತೆಯು ಅಧಿಕವಾಗಿರುತ್ತದೆ. ಆದ್ದರಿಂದ ಮಧ್ಯಾಹ್ನದ ಸಮಯದಲ್ಲಿ ಶ್ರಮದಾಯಕ ಕೆಲಸಗಳನ್ನು ಮಾಡಬೇಡಿ. ಹೆಚ್ಚು ನೀರನ್ನು ಕುಡಿಯಿರಿ. ಹೆಚ್ಚು ಸಕ್ಕರೆಯುಕ್ತ ಪಾನೀಯಗಳು, ಕಾರ್ಬೋನೇಟೆಡ್ ಪಾನೀಯಗಳನ್ನು ಕುಡಿಯಬೇಡಿ. ಇದರಿಂದ ನಿರ್ಜಲೀಕರಣ ಉಂಟಾಗುತ್ತದೆ ಎಂಬುದಾಗಿ ತಿಳಿವಳಿಕೆ ನೀಡಬೇಕು. ತಿಳಿ ಬಣ್ಣದ ಬಟ್ಟೆಯನ್ನು ಧರಿಸಿರಿ, ಹೊರಾಂಗಣದಲ್ಲಿ ಕೆಲಸ ಮಾಡುವಾಗ ಆಗಾಗ್ಗೆ ವಿಶ್ರಾಂತಿ ಪಡೆಯುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಶಿಶು ಮರಣ ಪ್ರಮಾಣ ಕಡಿಮೆ ಮಾಡುವದಕ್ಕೆ ಗುಣಾತ್ಮಾಕ ಆರೋಗ್ಯ ಸೇವೆ, ಪ್ರಸವ ಪೂರ್ವ ಆರೈಕೆ, ಗಂಡಾಂತರ ಗರ್ಭಿಣಿ ಹೆರಿಗೆಗಳನ್ನು ಗುರುತಿಸಿ ಅವರಿಗೆ ಪ್ರಸೂತಿ ತಜ್ಞ ವೈದ್ಯರಿಂದ ಆರೈಕೆ ಹಾಗೂ ಆಪ್ತ ಸಮಾಲೋಚನೆ ಮೂಲಕ ಶೇ.100ರಷ್ಟು ಹೆರಿಗೆಗಳನ್ನು ಆರೋಗ್ಯ ಸಂಸ್ಥೆಗಳಲ್ಲಿ ಮಾಡಲಾಗುತ್ತಿದೆ ಎಂದರು.

ಪ್ರತಿ ವರ್ಷ ಸಾವಿರಾರು ಜನರು ವಿಶೇಷವಾಗಿ ಮಕ್ಕಳು ನಾಯಿ ಕಡಿತಕ್ಕೆ ಒಳಗಾಗುತ್ತಾರೆ. ಸರಿಯಾದ ಅರಿವು ಮತ್ತು ಮುನ್ನೆಚ್ಚರಿಕೆಗಳೊಂದಿಗೆ ನಾಯಿ ಕಡಿತವನ್ನು ತಡೆಗಟ್ಟಬಹುದು. ಆದ್ದರಿಂದ ಎಲ್ಲ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರ್‍ಯಾಬೀಸ್ ವ್ಯಾಕ್ಸಿನೇಷನ್ (ಲಸಿಕೆ) ದಾಸ್ತಾನು ಇರುವಂತೆ ನೋಡಿಕೊಳ್ಳಬೇಕು ಮತ್ತು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಸುಸಜ್ಜಿತ ಸರಕಾರಿ ಆಸ್ಪತ್ರೆಗಳು ಹಾಗೂ ಅಲ್ಲಿ ನೀಡುವ ಗುಣಮಟ್ಟದ ಆರೋಗ್ಯ ಸೇವೆಗಳು, ಪ್ರಸವಪೂರ್ವ ಮತ್ತು ಪ್ರಸವೊತ್ತರ ಆರೈಕೆ ಮೂಲಕ ನಮ್ಮ ಜಿಲ್ಲೆಯಲ್ಲಿ ಗರ್ಭಿಣಿಯರ ಆರೋಗ್ಯದ ಸೌಲಭ್ಯಗಳ ಕುರಿತು ಸಭೆಗೆ ಮಾಹಿತಿ ನೀಡಲಾಯಿತು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ಶಿವಾನಂದ ಮಾಸ್ತಿಹೊಳಿ,ಡಿಎಚ್‌ಇ, ಡಬ್ಲೂಎಚ್.ಓ ಅಧಿಕಾರಿಗಳಾದ ಡಾ. ಮುಕುಂದ ಗಲಗಲಿ, ಆರ್.ಸಿಎಚ್‌ಓ ಬಿ.ಎಲ್.ಡಿ.ಈ ಸಂಸ್ಥೆಯ ಪ್ರಸೂತಿ ತಜ್ಞರು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು, ಎಲ್ಲ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು.

# ನಿಷ್ಕಾಮ ಭಕ್ತಿಯಿಂದ ಮಾತ್ರ ಪರಶಿವನ ಒಲಿಸಿಕೊಳ್ಳಲು ಸಾಧ್ಯ: ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು



ಗೋಕಾಕ: ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಿರುವುದು.

**ಬೆಳಗಾವಿ ವಾರ್ತೆ ಗೋಕಾಕ:** ಅನುಭವ ಮತ್ತು ಜ್ಞಾನದಿಂದ ಭಕ್ತಿ ಹುಟ್ಟುತ್ತದೆ. ನಿಷ್ಕಾಮ ಭಕ್ತಿಯಿಂದ ಮಾತ್ರ ಪರಶಿವನ ಒಲಿಸಿ ಕೊಳ್ಳಲು ಸಾಧ್ಯ ಎಂದು ಶ್ರೀ ಶೂನ್ಯ ಸಂಪಾದನ ಮಠದ ಪೀಠಾಧಿಪತಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀ ಶೂನ್ಯ ಸಂಪಾದನ ಮಠದಲ್ಲಿ ಬಸವೇಶ್ವರ ಧರ್ಮ ಪ್ರಚಾರಕ ಸಂಸ್ಥೆ , ವಚನ ಸಾಹಿತ್ಯ ಚಿಂತನ ಮಂಥನ ವೇದಿಕೆ ಹಾಗೂ ಲಿಂಗಾಯತ ಮಹಿಳಾ ವೇದಿಕೆ ಇವುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ 196ನೇ ಮಾಸಿಕ ಶಿವಾನುಭವಗೋಷ್ಠಿ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಅವರು ಮಾತನಾಡಿದರು.

ನದಿ ಇಂಗಳಗಾವಿಯ ಗುರುಲಿಂಗ ದೇವರ ಮಠದ ಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು ಮಾತನಾಡಿ ಭೂಮಿಯ ಮೇಲಿರುವ ಸಕಲ ಪಶು, ಪಕ್ಷಿ, ಪ್ರಾಣಿಗಳು ನೆಮ್ಮದಿಯಿಂದ ಬದುಕುತ್ತಿವೆ. ಆ ನೆಮ್ಮದಿ ಮನುಷ್ಯನಿಗೆ ಇಲ್ಲವಾಗಿದೆ. ಮನುಷ್ಯರು ಅತಿಯಾಗಿ ಸಂಸಾರಕ್ಕೆ ಅಂಟಿಕೊಂಡು, ಸ್ವಾರ್ಥಿಯಾಗಿ ಬದುಕುತ್ತಿದ್ದಾರೆ. ನಿಷ್ಕಾಮ ಭಕ್ತಿಯನ್ನು ಅನುಸರಿಸಿ, ವಿಶ್ವಾಸ ಮತ್ತು ನಂಬಿಕೆಯಿಂದ ಭಗವಂತನನ್ನು ಕಾಣಬಹುದು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸನಗೌಡ ಪಾಟೀಲ ವಹಿಸಿದ್ದರು.

ವೇದಿಕೆಯ ಮೇಲೆ ಲಿಂಗಾಯತ ಮಹಿಳಾ ವೇದಿಕೆಯ ಅಧ್ಯಕ್ಷ ಶ್ರೀಮತಿ ಸೇವಂತಾ ಅಶೋಕ ಮುಚ್ಚಂಡಿಹಿರೇಮಠ, ನೀಲಕಂಠ ಚನ್ನಬಸಪ್ಪ ತೋಟಗಿ, ಪ್ರಸನ್ನ ತಂಬಾಕೆ, ಮಲ್ಲಪ್ಪ ನೇಸರಗಿ, ಮಲ್ಲಿಕಾರ್ಜುನ್ ರಾಮಯ್ಯ ಮಡ್ಡೇನಿ, ಅಭಿಷೇಕ ಮುಚ್ಚಂಡಿ ಹಿರೇಮಠ, ಆರ್.ಎಲ್. ಮಿರ್ಜಿ, ಎಸ್ ಕೆ ಮಠದ ಉಪಸ್ಥಿತರಿದ್ದರು.

# ಧಾರವಾಡದಲ್ಲಿ ಬೌದ್ಧ ಸನ್ಯಾಸಿಯ ನಿಗೂಢ ಕೊಲೆ ರಹಸ್ಯ ಬಯಲು: ಹಣಕ್ಕಾಗಿ ಕೊಂದ ಹಂತಕರು ಪೊಲೀಸ್ ಬಲೆಗೆ!

**ಬೆಳಗಾವಿ ವಾರ್ತೆ ಧಾರವಾಡ:** ಇತ್ತೀಚೆಗೆ ಧಾರವಾಡ ಬೈಪಾಸ್ ಬಳಿ ಟಿಬೆಟಿಯನ್ ಮೂಲದ ಬೌದ್ಧ ಸನ್ಯಾಸಿ ತಾಶಿ ಧೊಂದೂಪ ಎಂಬುವವರ ಶವ ನಿಗೂಢ ರೀತಿಯಲ್ಲಿ ಪತ್ತೆಯಾಗಿತ್ತು. ಆರಂಭದಲ್ಲಿ ಇದು ರಸ್ತೆ ಅಪಘಾತ ಎನ್ನಲಾಗಿತ್ತಾದರೂ, ಪೊಲೀಸರು ಸತತ ತನಿಖೆ ನಡೆಸಿ ಇದು ಹಣಕ್ಕಾಗಿ ನಡೆದ ಬರ್ಬರ ಹತ್ಯೆ ಎಂಬುವುದನ್ನು ಬಯಲಿಗೆಳೆದಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಕೊಲ್ಹಾಪುರ ಮೂಲದ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಘಟನೆಯ ಹಿನ್ನೆಲೆ: ಬೌದ್ಧ ಸನ್ಯಾಸಿಗಳ ಬಳಿ ಅಪಾರ ಹಣವಿರುತ್ತದೆ ಎಂಬ ತಪ್ಪು ಕಲ್ಪನೆಯಿಂದ ಹಂತಕರು ಸಂಚು ರೂಪಿಸಿದ್ದರು. ಏಪ್ರಿಲ್ 28 ರಂದು ಮುಂಡಗೋಡದಲ್ಲಿ ಸನ್ಯಾಸಿ ತಾಶಿ ಧೊಂದೂಪ ಅವರು ವಾಕಿಂಗ್ ಮಾಡುತ್ತಿದ್ದ ವೇಳೆ ಆರೋಪಿಗಳು ಅವರನ್ನು ಕಾರಿನಲ್ಲಿ ಅಪಹರಿಸಿದ್ದರು. ಕಾರಿನಲ್ಲೇ ಹಣಕ್ಕಾಗಿ ಪೀಡಿಸಿ, ದೈಹಿಕವಾಗಿ ಹಿಂಸೆ ನೀಡಿದ್ದಾರೆ. ಆದರೆ ಸನ್ಯಾಸಿಯ ಬಳಿ ಹಣವಿಲ್ಲದಿದ್ದಾಗ



ಆಕ್ರೋಶಗೊಂಡ ದುಷ್ಕರ್ಮಿಗಳು ಅವರ ಮೇಲೆ ತೀವ್ರವಾಗಿ ಹಲ್ಲೆ ನಡೆಸಿ ಕೊಲೆ ಮಾಡಿದ್ದಾರೆ. ನಂತರ ಪೊಲೀಸರ ಕಣ್ಣು ತಪ್ಪಿಸಲು ಶವವನ್ನು ಧಾರವಾಡ ಬೈಪಾಸ್ ಬಳಿ ಎಸೆದು ಪರಾರಿಯಾಗಿದ್ದರು.

ಪೊಲೀಸರ ಭರ್ಜರಿ ಕಾರ್ಯಾಚರಣೆ: ಯಾವುದೇ ಬಲವಾದ ಸುಳಿವು ಇಲ್ಲದಿದ್ದರೂ ಧಾರವಾಡ ಗ್ರಾಮೀಣ ಪೊಲೀಸರು ತನಿಖೆಯನ್ನು ಸವಾಲಾಗಿ ಸ್ವೀಕರಿಸಿದ್ದರು. ಮುಂಡಗೋಡಿನ ಪೆಟ್ರೋಲ್ ಬಂಕ್‌ವೊಂದರಲ್ಲಿ ಹಂತಕರು ಕಾರಿಗೆ ಸಿಎಸ್‌ಜಿ ತುಂಬಿಸಲು ಇಳಿದಾಗ ಸಿಸಿಟಿವಿ ಯಲ್ಲಿ ಸೆರೆಯಾಗಿದ್ದರು. ಈ ದೃಶ್ಯವನ್ನೇ ಬೆನ್ನತ್ತಿದ ಪೊಲೀಸರು ವಾರದ ಕಾಲ ಹಗಲಿರುಳು ಶ್ರಮಿಸಿ, ಮಹಾರಾಷ್ಟ್ರದ ಕೊಲ್ಹಾಪುರಕ್ಕೆ ತೆರಳಿ ಆರೋಪಿಗಳಾದ ಸಂಕೇತ ಯಾದವ್(24), ವೈಭವ್ ಚವ್ಹಾಣ(30) ಮತ್ತು ಸಿದ್ಧೇಶ ಭೋಸ್ಲೆ(18) ಎಂಬುವವರನ್ನು ಹೆಡೆಮುರಿ ಕಟ್ಟಿದ್ದಾರೆ. ಉಳಿದ ಇಬ್ಬರು ಆರೋಪಿಗಳಿಗಾಗಿ ಶೋಧ ಕಾರ್ಯ ಮುಂದುವರಿದಿದೆ.

# ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕುವಂತೆ ಮನವಿ ಸಲ್ಲಿಕೆ

**ಬೆಳಗಾವಿ ವಾರ್ತೆ ಗೋಕಾಕ:** ನಗರದ ಹೈಸ್ಕೂಲ ರಸ್ತೆಯಲ್ಲಿ (ಕಿಲ್ಲಾ ಹತ್ತಿರ) ನಿರ್ಮಾಣ ಮಾಡಿದ ಹೊಸ ಬ್ರಿಜ್ ಮೇಲೆ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕುವಂತೆ ಸ್ಥಳೀಯರು ಪೋಲಿಸ್ ಠಾಣೆಗೆ ಮನವಿ ಮಾಡಿದ್ದಾರೆ.

ಶಿಂಗಳಾಪೂರ ಬಂಗಲೇ, ಶಿಂಗಳಾಪೂರ ಹಾಗೂ ಲೋಳಸೂರ ಗ್ರಾಮಕ್ಕೆ ನಿತ್ಯ ಸಾರ್ವಜನಿಕರು ಸಂಚರಿಸುತ್ತಿದ್ದು, ಅಲ್ಲದೇ ಗೋಕಾಕ ನಗರದ ಸಾರ್ವಜನಿಕರು ಬೆಳಿಗ್ಗೆ ಮತ್ತು ಸಂಜೆ ವಾಯುವಿಹಾರಕ್ಕೆ ತೆರಳುತ್ತಾರೆ. ಈ ಬ್ರೀಡ್ಜ್ ಮೇಲೆ ಬೈಕ್, ಕಾರ್ ಮತ್ತು ಆಟೋ ರೀಕ್ಷಾಗಳನ್ನು ಎಲ್ಲೆಂದರಲ್ಲಿ ಪಾರ್ಕಮಾಡಿ ಹಾಡು ಹಚ್ಚಿಕೊಂಡು ಸರಾಯಿ ಕುಡಿಯುತ್ತಿದ್ದು ಕುಡಿದ ಸರಾಯಿ ಬಾಟಲಿಗಳನ್ನು ರಸ್ತೆ ಮೇಲೆ ಮತ್ತು ರಸ್ತೆ ಪಕ್ಕದಲ್ಲಿ ಒಡೆದು ಹೋಗುತ್ತಿದ್ದಾರೆ.



ಗೋಕಾಕ: ನಗರದ ಹೈಸ್ಕೂಲ ರಸ್ತೆಯಲ್ಲಿ (ಕಿಲ್ಲಾ ಹತ್ತಿರ) ನಿರ್ಮಾಣ ಮಾಡಿದ ಹೊಸ ಬ್ರಿಜ್ ಮೇಲೆ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕುವಂತೆ ಸ್ಥಳೀಯರು ಪೋಲಿಸ್ ಠಾಣೆಗೆ ಮನವಿ ಮಾಡಿದ್ದಾರೆ.

ಹೀಗಾಗಿ ಸಾರ್ವಜನಿಕರಿಗೆ ತೊಂಡರೆಯುಂಟಾಗುತ್ತಿದ್ದು ಕೂಡಲೇ ಅಂತಹ ಕಿಡಿಗೇಡಿಗಳ ವಿರುದ್ಧ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಎಂದು ಪೋಲಿಸರಿಗೆ ಮನವಿ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ರೈತ ಹೋರಾಟಗಾರ ಮಂಜುನಾಥ ಪೂಜೇರಿ ಸೇರಿದಂತೆ ಅನೇಕರು ಇದ್ದರು.

# ವಿಡಿಯೋ ಕಾಲ್‌ಗಾಗಿ ಅತ್ತೆಗೆ ಚಾಕು ಹಾಕಿದ ಅಳಿಯ




**ಬೆಳಗಾವಿ ವಾರ್ತೆ ಬೆಳಗಾವಿ:** ತವರಿನಲ್ಲಿರುವ ಪತ್ನಿಯ ಜತೆ ವಿಡಿಯೋ ಕಾಲ್ ಮಾಡಿ ಮಾತನಾಡಲು ಅಡ್ಡಿಪಡಿಸುತ್ತಿದ್ದ ಅತ್ತೆಯ ಮೇಲೆ ಚಾಕುವಿನಿಂದ ಇರಿದು ಗಂಭೀರ ಹಲ್ಲೆ ಮಾಡಿರುವ ಘಟನೆ ಸವದತ್ತಿ ತಾಲೂಕಿನ ಆಲದಕಟ್ಟಿ ಗ್ರಾಮದಲ್ಲಿ ನಡೆದಿದೆ.

ಅರವಿಂದ ಗವಳಿ (26) ಎಂಬುವನೇ ಹೆಣ್ಣು ಕೊಟ್ಟ ಅತ್ತೆಯ ಮೇಲೆ ಅಮಾನವೀಯವಾಗಿ ಚಾಕು ಇರಿದ ಅಳೀಮಯ್ಯ. ಸದ್ಯ ಈತನನ್ನು ಪೊಲೀಸರು ಬಂಧಿಸಿದ್ದಾರೆ.

ಮಹಾದೇವಿ ಕರಿಗಾರ (45) ಅರವಿಂದನಿಗೆ ಮಗಳನ್ನು ಎರಡು ವರ್ಷಗಳ ಹಿಂದೆ ಮದುವೆ ಮಾಡಿಕೊಡಲಾಗಿತ್ತು. ಕಳೆದೆರಡು ತಿಂಗಳ ಹಿಂದೆಯಷ್ಟೇ ಅರವಿಂದ ಪತ್ನಿಗೆ ಚೊಚ್ಚಲ ಹೆರಿಗೆಯಾಗಿ ಬಾಣಂತನಕ್ಕೆ ತವರು ಮನೆಗೆ ಬಂದಿದ್ದಳು.

ಆದರೆ ಈ ಮಧ್ಯೆ ದಿನಕ್ಕೆ ಹತ್ತಿಪ್ಪತ್ತು ಸಲ ಪತ್ನಿಗೆ ವಿಡಿಯೋ ಕರೆ ಮಾಡಿ ಸತಾಯಿಸುತ್ತಿದ್ದ ಅರವಿಂದ ಮಗುವನ್ನು ತೋರಿಸು ಎಂದು ದುಂಬಾಲು ಬೀಳುತ್ತಿದ್ದ. ಅಳಿಯನ ಕಿತಾಪತಿಯಿಂದ ಬಾಣಂತಿ ಮಗಳು ತೊಂದರೆ ಅನುಭವಿಸುತ್ತಿರುವುದನ್ನು ಕಂಡ ಅತ್ತೆ ಮಹಾದೇವಿ ಹೀಗೆ ದಿನಕ್ಕೆ ಹಲವು ಸಲ ಕರೆ ಮಾಡಬೇಡ. ಬಾಣಂತಿ ಜಾಸ್ತಿ ಮೊಬೈಲ್ ಬಳಕೆ ಮಾಡಬಾರದು. ಒಮ್ಮೆ ಕರೆ ಮಾಡಿ ಮಾತಾಡಿದ್ರೆ ಸಾಕು ಎಂದು ಬುದ್ದಿಹೇಳಿದ್ದಳು.

ಇದರಿಂದ ಕೋಪಗೊಂಡ ಅಳಿಯ ಅರವಿಂದ ಅತ್ತೆಯ ಜತೆ ಜಗಳ ತೆಗೆದು ಆಕೆಯ ಮೇಲೆ ಚಾಕುವಿನಿಂದ ತಿವಿದು ತೀವ್ರ ಗಾಯಗೊಳಿಸಿ ಪರಾರಿಯಾಗಿದ್ದಾನೆ. ನಂತರ ತನ್ನ ವಾಟ್ಸಾಪ್‌ನಲ್ಲಿ 'ಇಂದು ಜೈಲು ನಾಳೆ ಬೇಲು.. ನಿನ್ನನ್ನು ಬಿಡಲ್ಲ, ವೇಯ್ಟ್ ಅಂಡ್ ಸೀ' ಎಂದು ಸ್ಟೇಟಸ್ ಹಾಕಿ ವಿಕೃತಿ ಮೆರೆದಿದ್ದಾನೆ. ಗಾಯಾಳು ಮಹಾದೇವಿಗೆ ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮುರಗೋಡ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕೇಂದ್ರ ಚುನಾವಣಾ ಆಯುಕ್ತರಿಂದ ಬಂಗಾಳ, ಅಸ್ಸಾಂನಲ್ಲಿ ಬಿಜೆಪಿ ಗೆಲುವು: CEC ಜ್ಞಾನೇಶ್ ಕುಮಾರ್ 'ಮ್ಯಾನ್ ಆಫ್ ದಿ ಮ್ಯಾಚ್; ಸಚಿವ ಸಂತೋಷ್ ಲಾಡ್



**ಬೆಳಗಾವಿ ವಾರ್ತೆ ಬೆಂಗಳೂರು:** ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ಕೇಂದ್ರ ಚುನಾವಣೆ ಆಯುಕ್ತ ಜ್ಞಾನೇಶ್ ಕುಮಾರ್‌ರಿಂದ ಬಿಜೆಪಿಗೆ ಗೆಲುವಾಗಿದೆ ಎಂದು ಸಚಿವ ಸಂತೋಷ್ ಲಾಡ್ ಆರೋಪಿಸಿದ್ದಾರೆ.

ಪಂಚರಾಜ್ಯ ಚುನಾವಣೆ ಮತ್ತು ಉಪ ಚುನಾವಣೆ ಫಲಿತಾಂಶದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಉಪ ಚುನಾವಣೆಯಲ್ಲಿ ನಿರೀಕ್ಷೆಯಂತೆ 2 ಕ್ಷೇತ್ರದಲ್ಲಿ ನಾವು ಗೆದ್ದಿದ್ದೇವೆ. ಸರ್ಕಾರದ ಕಾರ್ಯಕ್ರಮ ಅದರ ಜೊತೆ ಕಾರ್ಯಕರ್ತರು, ಮುಖಂಡರ ಕೆಲಸದಿಂದ ಜನ ವೋಟ್ ಹಾಕಿ ಗೆಲ್ಲಿಸಿದ್ದಾರೆ ಎಂದು ತಿಳಿಸಿದರು.

ಅಸ್ಸಾಂನಲ್ಲಿ ಮ್ಯಾನ್ ಆಫ್ ದಿ ಮ್ಯಾಚ್, ಮ್ಯಾನ್ ಆಫ್ ದಿ ಸಿರಿಸ್ ಜ್ಞಾನೇಶ್ ಕುಮಾರ್ ಇದ್ದಾರೆ. ಅದರ ಬಗ್ಗೆ ಮಾಹಿತಿ ಕೊಡುತ್ತೇವೆ. ಪಶ್ಚಿಮ ಬಂಗಾಳ 90 ಲಕ್ಷ ವೋಟ್ ಡಿಲೀಟ್ ಮಾಡಿ, ಬೇಕಾದ ಕಡೆ ವೋಟ್ ಡಿಲೀಟ್ ಮಾಡಿದ್ದಾರೆ. ಟಿಎಂಸಿ ಸೋಲಿಸೋ ವ್ಯವಸ್ಥೆ ಮಾಡಿದ್ದಾರೆ. ಆಡಳಿತ ವಿರೋಧಿ ಅಲೆ ಕೂಡಾ ಇತ್ತು. ಚುನಾವಣೆ ಆಯೋಗಕ್ಕೆ ಜ್ಞಾನೇಶ್ ಕುಮಾರ್ ಬಂದ ಮೇಲೆ ಬಿಜೆಪಿ ಗೆಲುವಿನ ಮಾರ್ಜಿನ್‌ಗಳನ್ನ ದಾಟಿಸುವ ಮುಂದಾಳತ್ವ ತೆಗೆದುಕೊಂಡಿದ್ದಾರೆ.

ಕೆಲಸದ ಮೇಲೆ ವೋಟ್ ಕೇಳದೇ ಜ್ಞಾನೇಶ್ ಕುಮಾರ್ ಮೂಲಕ ಫ್ರಾಡ್ ಮಾಡಿ ಗೆದ್ದಿದ್ದಾರೆ. ಅವರಿಗೆ ಶುಭವಾಗಲಿ. ಎಲ್ಲರಿಗೂ ಒಂದು ಕಾಲ ಬರುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# 'ನಾರಿ ಶಕ್ತಿ' ವಿರೋಧಿಸಿದ್ದಕ್ಕೆ ತಕ್ಕ ಉತ್ತರ ಸಿಕ್ಕಿದೆ: TMC-DMK ವಿರುದ್ಧ ಸೋಮಣ್ಣ ಕಿಡಿ

**ಬೆಳಗಾವಿ ವಾರ್ತೆ ಬೆಂಗಳೂರು:** ಮಹಿಳಾ ಮೀಸಲಾತಿ ವಿಧೇಯಕವನ್ನು ವಿರೋಧಿಸಿದ್ದ ವಿರೋಧ ಪಕ್ಷಗಳಿಗೆ ಮಹಿಳಾ ಮತದಾರರು ತಕ್ಕ ಪಾಠ ಕಲಿಸಿದ್ದಾರೆಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆಯ ರಾಜ್ಯ ಸಚಿವ ವಿ.ಸೋಮಣ್ಣ ಅವರು ಹೇಳಿದ್ದಾರೆ.

ಬೆಂಗಳೂರುದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತೃಣಮೂಲ ಕಾಂಗ್ರೆಸ್ (ಟಿಎಂಸಿ), ದ್ರಾವಿಡ ಮುನ್ನೇತ್ರ ಕಳಗಂ(ಡಿಎಂಕೆ) ಹಾಗೂ ಎಡಪಂಥೀಯ ಪಕ್ಷಗಳು ಮಹಿಳಾ ಸಬಲೀಕರಣವನ್ನು ಕಡೆಗಣಿಸಿ ಮಹಿಳಾ ಮೀಸಲಾತಿ ವಿಧೇಯಕಕ್ಕೆ ವಿರೋಧ ವ್ಯಕ್ತಪಡಿಸಿದ್ದವು. 'ನಾರಿ ಶಕ್ತಿ' ಬಲಪಡಿಸಲು ಈ ವಿಧೇಯಕವನ್ನು ತರಲಾಗಿತ್ತು. ಈ ವಿಧೇಯಕಕ್ಕೆ ವಿರೋಧ ವ್ಯಕ್ತಪಡಿಸಿದವರಿಗೆ ಇದೀಗ ತಕ್ಕ ಉತ್ತರ ಸಿಕ್ಕಿದೆ ಎಂದು ಹೇಳಿದರು.

ಪ್ರಧಾನಮಂತ್ರಿ ಮೋದಿ ನೇತೃತ್ವದಲ್ಲಿ ಈ ವಿಧೇಯಕಕ್ಕೆ ಉತ್ತೇಜನ ದೊರೆತಿದ್ದು, ಅದಕ್ಕೆ ವಿರೋಧಿಸಿದ ಪಕ್ಷಗಳನ್ನು ಜನರು ತಿರಸ್ಕರಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸಾಧನೆ ಹೆಚ್ಚಾಗಿರುವುದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಆಡಳಿತದ ವಿರುದ್ಧ ಜನರ



ಅಸಮಾಧಾನವನ್ನು ತೋರಿಸುತ್ತದೆ ಎಂದರು.

ತಮಿಳುನಾಡಿನ ದ್ರಾವಿಡ ಮುನ್ನೇತ್ರ ಕಳಗಂ ಸರ್ಕಾರದ ಕುಟುಂಬ ರಾಜಕೀಯ"ವನ್ನು ಟೀಕಿಸಿದ ಅವರು, ಜನರು ಬದಲಾವಣೆಯನ್ನು ಬಯಸುತ್ತಿದ್ದಾರೆ ಎಂದು ತಿಳಿಸಿದರು.

ಕರ್ನಾಟಕದ ಕುರಿತು ಮಾತನಾಡಿದ ಅವರು, ಕಾಂಗ್ರೆಸ್ ಹಣ ಮತ್ತು ಪ್ರಭಾವ ಬಳಸಿ ಅಧಿಕಾರಕ್ಕೆ ಬಂದಿದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಾಯಕತ್ವ ಕುರಿತಂತೆಯೂ ಟೀಕೆ ಮಾಡಿದರು.

ಬಳಿಕ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ವಾಗ್ದಾಳಿ ನಡೆಸಿದ ಸೋಮಣ್ಣ ಅವರು, ಸೋಲಿನ ನಂತರ ಮಾತ್ರ ಇವಿಎಂ ಬಗ್ಗೆ ಪ್ರಶ್ನಿಸುವುದು ರಾಜಕೀಯ ಉದ್ದೇಶವನ್ನು ಹೊಂದಿದೆ ಎಂದು ಆರೋಪಿಸಿದರು.

ಮುಂದಿನ ದಿನಗಳಲ್ಲಿ ಪಶ್ಚಿಮ ಬಂಗಾಳ ಹಾಗೂ ಕೇರಳದಂತಹ ರಾಜ್ಯಗಳಲ್ಲಿ ಬಿಜೆಪಿ ಸಾಧನೆ ರಾಷ್ಟ್ರೀಯ ರಾಜಕೀಯದ ದಿಕ್ಕನ್ನೇ ಬದಲಾಯಿಸಬಹುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.ಇದೇ ವೇಳೆ ಕರ್ನಾಟಕದಲ್ಲಿ ಪಕ್ಷದ ದೌರ್ಬಲ್ಯಗಳನ್ನು ಸರಿಪಡಿಸುವುದಾಗಿ ಹೇಳಿದರು.

# ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ, ಆ ಬಗ್ಗೆ ಚರ್ಚೆ ಅಪ್ರಸ್ತುತ: ಪ್ರಿಯಾಂಕ್ ಖರ್ಗೆ

**ಬೆಳಗಾವಿ ವಾರ್ತೆ ಬೆಂಗಳೂರು:** ಮುಖ್ಯಮಂತ್ರಿ ಸ್ಥಾನದ ಲ್ಲಿ ಯಾವುದೇ ಬದಲಾವಣೆ ಸಾಧ್ಯತೆ ಇಲ್ಲ, ಆ ಹುದ್ದೆ ಖಾಲಿ ಇಲ್ಲ ಎಂದು ಗ್ರಾಮೀ ಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ತಮ್ಮ ತಂದೆ ಹಾಗೂ ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ ಎಂದು ಈಗಾಗಲೇ ಸ್ಪಷ್ಟವಾಗಿ ಹೇಳಿದ್ದಾರೆ. ಆದ್ದರಿಂದ ಯಾವುದೇ ಬದಲಾವಣೆ ಕುರಿತ ಚರ್ಚೆ ಅಪ್ರಸ್ತುತವಾಗಿದೆ ಎಂದು ಪ್ರಿಯಾಂಕ್ ಗಾಂಧಿ ನಿನ್ನೆ ಸುದ್ದಿಗಾರರಿಗೆ ತಿಳಿಸಿದರು.

ಜೂನ್‌ನಲ್ಲಿ ಮುಖ್ಯಮಂತ್ರಿ ಬದಲಾವಣೆ ಸಾಧ್ಯತೆ ಇದೆ ಎಂಬ ಊಹಾಪೋಹಗಳ ನಡುವೆ ಅವರ ಈ ಹೇಳಿಕೆ ಮಹತ್ವ ಪಡೆದಿದೆ. ಕರ್ನಾಟಕ ಕಾಂಗ್ರೆಸ್ ವಲಯದಲ್ಲಿ ನಾಯಕತ್ವ ಹಾಗೂ ಸರ್ಕಾರದಲ್ಲಿ ಸಂಭವನೀಯ



ಬದಲಾವಣೆಗಳ ಬಗ್ಗೆ ನಡೆಯುತ್ತಿರುವ ರಾಜಕೀಯ ಚರ್ಚೆಗಳ ನಡುವೆಯೇ ಈ ಪ್ರತಿಕ್ರಿಯೆ ಬಂದಿದೆ. ಪ್ರಸ್ತುತ ನಾಯಕತ್ವ ವ್ಯವಸ್ಥೆಯ ಕುರಿತು ಹೈಕಮಾಂಡ್‌ನ ನಿಲುವನ್ನು ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಮತ್ತೊಮ್ಮೆ ಬಲಪಡಿಸಿದೆ.

ಅಕ್ಟೋಬರ್ ಕ್ರಾಂತಿ ಅಥವಾ ನವೆಂಬರ್ ಕ್ರಾಂತಿ ಎಂಬ ಊಹಾಪೋಹಗಳ ನಡುವೆ ಮುಖ್ಯಮಂತ್ರಿ ಬದಲಾವಣೆ ಅಥವಾ ಸಚಿವ ಸಂಪುಟ ಪುನಾರಚನೆ ಬಗ್ಗೆ ಚರ್ಚೆಗಳು ಅಕ್ಟೋಬರ್‌ನಿಂದಲೇ ಕೇಳಿಬರುತ್ತಿದ್ದವು. ಮುಖ್ಯಮಂತ್ರಿ ಬದಲಾವಣೆ ಕುರಿತು ಕಾಂಗ್ರೆಸ್ ಅಧಿಕೃತ ವಾಗಿ ಇನ್ನೂ ಯಾವುದೇ ಘೋಷಣೆ ಮಾಡಿಲ್ಲ, ಆದರೆ ಕೆಲವರು ಜೂನ್‌ನಲ್ಲಿ ಬದಲಾವಣೆ ಸಂಭವಿಸಬಹುದು ಎಂದು ಹೇಳುತ್ತಿದ್ದಾರೆ.

# ಗ್ರಾಮೀಣ ಕುಡಿಯುವ ನೀರು: ಸಹಾಯವಾಣಿ ಕೆಂದ್ರ ಸ್ಥಾಪನೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ ಬೇಸಿಗೆ ಕಾಲದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಪಂಚಾಯಿತಿ ವತಿಯಿಂದ ಅಗತ್ಯಕ್ಕೆ ತಕ್ಕಂತೆ ಎಲ್ಲ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಪ್ರಸ್ತುತ ಕಾಲದಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗ್ರಾಮಸ್ಥರಿಗೆ ಶೀಘ್ರವಾಗಿ ಸ್ಪಂಧಿಸಲು ಮತ್ತು ಕುಂದುಕೊರತೆಗಳನ್ನು ಪರಿಹರಿಸಲು ಜಿಲ್ಲಾ ಮಟ್ಟ ಹಾಗೂ ತಾಲೂಕಾ ಮಟ್ಟದಲ್ಲಿ ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.

ಗ್ರಾಮೀಣ ಭಾಗದ ಜನರು ತಮ್ಮ ಗ್ರಾಮದಲ್ಲಿ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಕಂಡುಬರುವ ತೊಂದರೆಗಳನ್ನು ಈ ಕೆಳಕಂಡ ದೂರವಾಣಿ ಸಂಖ್ಯೆಗೆ ಕರೆ ಮಾಡಿ ತಮ್ಮ ಕುಂದುಕೊರತೆಗಳನ್ನು ದಾಖಲಿಸಬಹುದಾಗಿದೆ. ಜಿ.ಪಂ ಕಾರ್ಯಾಲಯ (08354-200180), ಕಾರ್ಯನಿವಾರ್ಹಕ ಇಂಜಿನೀಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ (9482273638), ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ ಉಪ ವಿಭಾಗ ಕಚೇರಿ ಬಾಗಲಕೋಟೆ (9916889472), ಬಾದಾಮಿ ಮತ್ತು ಗುಳೇದಗುಡ್ಡ (9480031005), ಬೀಳಗಿ (9902436899), ಹುನಗುಂದ ಮತ್ತು ಇಳಕಲ್ಲ (9448947542), ಜಮಖಂಡಿ ಮತ್ತು ರಬಕವಿ-ಬನಹಟ್ಟಿ (938050 9080), ಮುಧೋಳ (9591421346) ಕರೆ ಮಾಡಬಹುದಾಗಿದೆ.

ಸಹಾಯವಾಣಿ ಕೇಂದ್ರಗಳಲ್ಲಿ ದಾಖಲಾಗುವ ದೂರುಗಳಿಗೆ ಸಮಸ್ಯೆ ನಿವಾರಣೆಗೆ ತುರ್ತಾಗಿ ಅಗತ್ಯ ಪರಿಹಾರ ಕ್ರಮಗಳನ್ನು ಅನುಸರಿಸಲಾಗುತ್ತದೆ. ಆದ್ದರಿಂದ ಬಾಗಲಕೋಟೆ ಜಿಲ್ಲೆಯ ಗ್ರಾಮೀಣ ಭಾಗದ ಜನರು ಸಹಾಯವಾಣಿ ಕೇಂದ್ರಗಳ ಸದುಪಯೋಗ ಪಡಿಸಿಕೊಳ್ಳುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001